**ಪೊಲೀಸ್ ಇಲಾಖೆ / POLICE DEPARTMENT**

**Recruitment of Scientific Officers in Forensic Science Laboratory (FSL) – 2019**

**(ISO: 9001–2015 ಪ್ರಮಾಣಿತ ನೇಮಕಾತಿ ಪ್ರಕ್ರಿಯೆ)**

**ಅಧಿಸೂಚನೆ ಸಂಖ್ಯೆ.88/ನೇಮಕಾತಿ–2/2019–20**

**ವಿಷಯ: ನ್ಯಾಯ ವಿಜ್ಞಾನ ಪ್ರಯೋಗಾಲಯ/ ಪ್ರಾದೇಶಿಕ ನ್ಯಾಯ ವಿಜ್ಞಾನ ಪ್ರಯೋಗಾಲಯ ಘಟಕಗಳಲ್ಲಿ ಹಾಗೂ ಹೈದ್ರಬಾದ್–ಕರ್ನಾಟಕ ಮೀಸಲಾತಿಯಡಿ ಖಾಲಿ ಇರುವ ವೈಜ್ಞಾನಿಕ ಅಧಿಕಾರಿ ಹುದ್ದೆಗಳ ನೇಮಕಾತಿ ಕುರಿತು.**

~ ~ ~ ~

ವೈಜ್ಞಾನಿಕ ಅಧಿಕಾರಿಗಳ ಆಯ್ಕೆ ಸಮಿತಿಯ ಅಧ್ಯಕ್ಷರು ಮತ್ತು ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರು (ನೇಮಕಾತಿ) ರವರು ಕರ್ನಾಟಕ ರಾಜ್ಯ ನ್ಯಾಯ ವಿಜ್ಞಾನ ಪ್ರಯೋಗಾಲಯ, ಮಡಿವಾಳ, ಬೆಂಗಳೂರು ಮತ್ತು ಪ್ರಾದೇಶಿಕ ನ್ಯಾಯ ವಿಜ್ಞಾನ ಪ್ರಯೋಗಾಲಯಗಳಲ್ಲಿ ಖಾಲಿ ಇರುವ ವೈಜ್ಞಾನಿಕ ಅಧಿಕಾರಿ ಹುದ್ದೆಗಳಿಗೆ ಹಾಗೂ ಹೈದ್ರಬಾದ್–ಕರ್ನಾಟಕ ಹುದ್ದೆಗಳಿಗೆ ನೇಮಕಾತಿ ಮಾಡಲು ಕರ್ನಾಟಕ ರಾಜ್ಯ (ನ್ಯಾಯ ವಿಜ್ಞಾನ ಪ್ರಯೋಗಾಲಯ ಸೇವೆಗಳು) (ನೇಮಕಾತಿ) ನಿಯಮ, 2017, ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ, 2013, ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು, 2013, ಮತ್ತು ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಾವಳಿ 1977 ಹಾಗೂ ಮೇಲೆ ತಿಳಿಯಪಡಿಸಿದ ನಿಯಮಗಳಿಗೆ ಕಾಲಕಾಲಕ್ಕೆ ಆಗುವ ತಿದ್ದುಪಡಿಗಳ ಅನುಸಾರ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

1. **<u>ಅರ್ಜಿಯನ್ನು ಸಲ್ಲಿಸುವ ವಿಧಾನ</u>: ಅರ್ಜಿಗಳನ್ನು ಇಲಾಖೆಯ ಅಧಿಕೃತ ವೆಬ್‌ಸೈಟ್** www.ksp.gov.in ನಲ್ಲಿ **ಆನ್–ಲೈನ್ (On-line) (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಮಾತ್ರ ಸಲ್ಲಿಸತಕ್ಕದ್ದು, ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ.**

**<u>ವಿಶೇಷ ಸೂಚನೆಗಳು:–</u>**

**1] ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸಿರುವ ಮಾಹಿತಿ/ ಅಂಶಗಳು / ಮೀಸಲಾತಿಗಳನ್ನು ಆಧರಿಸಿ ನೇಮಕಾತಿ ಪ್ರಕ್ರಿಯೆಗೆ ಅವಕಾಶ ಕಲ್ಪಿಸುವುದರಿಂದ ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ಯಾವುದೇ ಮಾಹಿತಿ / ಅಂಶ ಮೀಸಲಾತಿಯ ಬದಲಾವಣೆ ಕೋರಿ ಸಲ್ಲಿಸುವ ಮನವಿಯನ್ನು ಪರಿಗಣಿಸಲಾಗುವುದಿಲ್ಲ. ಆದ್ದರಿಂದ ಯಾವುದೇ ತಪ್ಪು / ಸುಳ್ಳು ಮಾಹಿತಿ ನೀಡದೆ ಸರಿಯಾದ ಮಾಹಿತಿ ನೀಡಿ ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸತಕ್ಕದ್ದು.**

**2] ಒಂದಕ್ಕಿಂತ ಹೆಚ್ಚು ಹುದ್ದೆ / ವಿಭಾಗಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಅರ್ಜಿ ನಮೂನೆಯನ್ನು ಭರ್ತಿ ಮಾಡುವಾಗ ಹುದ್ದೆಗಳ ಆದ್ಯತೆಯನ್ನು ನಮೂದಿಸತಕ್ಕದ್ದು. ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸಿರುವ ಹುದ್ದೆಯ ಆದ್ಯತೆಯನುಸಾರ ಆಯ್ಕೆಗೆ ಪರಿಗಣಿಸಲಾಗುವುದು.**

**3] ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಕ್ಕೆ ಅಂದರೆ 18.03.2020ಕ್ಕೆ ಮೊದಲು ಅಭ್ಯರ್ಥಿಗಳು ಹುದ್ದೆಗೆ ನಿಗದಿಪಡಿಸಿದ ಶೈಕ್ಷಣಿಕ ವಿದ್ಯಾರ್ಹತೆ ಹಾಗೂ ಸರ್ಕಾರದಿಂದ ಅಂಗೀಕೃತವಾಗಿರುವ ಯಾವುದಾದರೂ ರೀಸರ್ಚ್ ಸಂಸ್ಥೆಯಲ್ಲಿ ರೀಸರ್ಚ್ ಸ್ಕಾಲರ್ ಆಗಿ 2 ವರ್ಷಕ್ಕಿಂತ ಕಡಿಮೆ ಇಲ್ಲದಂತೆ ಅನುಭವವನ್ನು ಹೊಂದಿರಬೇಕು.**

**ಸರ್ಕಾರಿ ರೀಸರ್ಚ್ ಸಂಸ್ಥೆಗಳನ್ನು ಹೊರತುಪಡಿಸಿ ಇತರೆ ಖಾಸಗಿ ರೀಸರ್ಚ್ ಸಂಸ್ಥೆಗಳಿಂದ ಪಡೆದಿರುವ ಅನುಭವ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ.**

**2) <u>ಶುಲ್ಕ</u>:**

| | |
|---|---|
| ಸಾಮಾನ್ಯ ವರ್ಗ, ಪ್ರವರ್ಗ 2(ಎ), 2(ಬಿ), 3(ಎ), 3(ಬಿ) ಗೆ ಸೇರಿದ ಅಭ್ಯರ್ಥಿಗಳಿಗೆ | `.250/– |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1ಕ್ಕೆ ಸೇರಿದ ಅಭ್ಯರ್ಥಿಗಳಿಗೆ | `.100/– |

ಎ) ನಿಗದಿತ ಶುಲ್ಕವನ್ನು ನಗದು ರೂಪದಲ್ಲಿ **<u>ಸ್ಥಳೀಯ ಅಂಚೆ ಕಛೇರಿಗಳಲ್ಲಿ ಅಥವಾ ಹೆಚ್.ಡಿ.ಎಫ್.ಸಿ ಬ್ಯಾಂಕಿನ ಅಧಿಕೃತ ಶಾಖೆಗಳಲ್ಲಿ</u>** ಪಾವತಿಸಿ ನಂತರ ಚಲನ್‌ನ 'ಅಭ್ಯರ್ಥಿ ಪ್ರತಿ'ಯನ್ನು ಇಟ್ಟುಕೊಂಡಿರತಕ್ಕದು.

ಬಿ) ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in ನಲ್ಲಿ ನೀಡಲಾಗಿರುವ ಸೂಚನೆಗಳನ್ನು ಓದಿಕೊಂಡು ಯಾವುದೇ ತಪ್ಪು ಮಾಹಿತಿ ನೀಡದೆ ಆನ್–ಲೈನ್‌ನಲ್ಲಿ ಲಭ್ಯವಿರುವ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು.

**ಟಿಪ್ಪಣಿ:** ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ನೇಮಕಾತಿ ಸಮಿತಿಯು ನಡೆಸುವ ಇತರೆ ಯಾವುದೇ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಮೇಲಿನ ಕಾಲಂಗಳಲ್ಲಿ ನಮೂದಿಸಿದಂತೆ ಅಭ್ಯರ್ಥಿಗೆ ಅನ್ವಯಿಸುವ ಒಟ್ಟು ಪರೀಕ್ಷಾ ಶುಲ್ಕವನ್ನು **ನಗದು ರೂಪದಲ್ಲಿ ಚಲನ್ ನೊಂದಿಗೆ ಮಾತ್ರ ಮೇಲೆ ನಮೂದಿಸಿರುವ ಬ್ಯಾಂಕ್‌ಗಳಲ್ಲಿ ಮತ್ತು ಅಂಚೆ ಕಛೇರಿಗಳಲ್ಲಿ** ಪಾವತಿಸತಕ್ಕದ್ದು. **ಡಿಡಿ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ.**

**3) ಆನ್–ಲೈನ್ (ಔಟಿ–ಟುಟಿಜ) ಮುಖಾಂತರ ಸಲ್ಲಿಸುವ ವಿಧಾನ :**

*ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಅಧಿಸೂಚನೆಯಲ್ಲಿನ ವಿವರಗಳನ್ನು ಓದಿಕೊಳ್ಳುವುದು ಹಾಗೂ ಎಲ್ಲಾ ದಾಖಲಾತಿಗಳನ್ನು ಸ್ಕ್ಯಾನಿಂಗ್ ಮಾಡಿಟ್ಟುಕೊಂಡಿರತಕ್ಕದ್ದು. ಉದಾ: ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ, ಶೈಕ್ಷಣಿಕ ಅರ್ಹತೆಯ ಅಂಕಪಟ್ಟಿಗಳು, ಕೆಲಸ ಮಾಡಿದ ಅನುಭವದ ಪ್ರಮಾಣ ಪತ್ರ ಹಾಗೂ ಇತರೆ ಪ್ರಮಾಣ ಪತ್ರಗಳು (ಜಾತಿ ಪ್ರಮಾಣ ಪತ್ರ, ಗ್ರಾಮೀಣ & ಹೈದ್ರಬಾದ್–ಕರ್ನಾಟಕ ಪ್ರಮಾಣ ಪತ್ರ ಇತ್ಯಾದಿ) (ಜೆಪಿಜಿ / ಜಿಫ್ ಫಾರ್ಮಾಟ್‌ನಲ್ಲಿ 250 ಕೆ.ಬಿ. ಒಳಗಿರಬೇಕು) ಭಾವಚಿತ್ರ ಮತ್ತು ಸಹಿ ಹಾಗೂ ಯಾವುದಾದರೂ ಗುರುತಿನ ಚೀಟಿ (ಜೆಪಿಜಿ / ಜಿಫ್ ಫಾರ್ಮಾಟ್‌ನಲ್ಲಿ 250 ಕೆ.ಬಿ. ಒಳಗಿರಬೇಕು).*

ಅರ್ಜಿದಾರ ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in ನಲ್ಲಿ ನೀಡಲಾಗಿರುವ ಅಧಿಸೂಚನೆ / ಸೂಚನೆಗಳನ್ನು ಜಾಗರೂಕತೆಯಿಂದ ಓದಿಕೊಂಡು ಭರ್ತಿ ಮಾಡಬೇಕು. ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in ನಲ್ಲಿನ ಅಣಾಡಿಡಿಜಟಿಣ ಖಜಛಿಡಿಣಚಿಟಿಜಟಿಣ ನಲ್ಲಿ ನೀಡಲಾಗಿರುವ ಸೂಚನೆಗಳನ್ನು ಓದಿಕೊಂಡು ಯಾವುದೇ ತಪ್ಪು ಮಾಹಿತಿಯನ್ನು ನೀಡದೇ ಆನ್–ಲೈನ್‌ನಲ್ಲಿ ಲಭ್ಯವಿರುವ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು. ತಪ್ಪು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಅಂತಹವರ ವಿರುದ್ಧ ಕಾನೂನಿನನ್ವಯ ನೇಮಕಾತಿ ಸಮಿತಿಯು ಸೂಕ್ತ ಕ್ರಮ ಕೈಗೊಳ್ಳುವುದು. ಅರ್ಜಿದಾರನ ಹೆಸರು, ಜಾತಿ, ಪ್ರವರ್ಗ, ಮೀಸಲಾತಿಗಳ ವಿವರ, ಹುಟ್ಟಿದ ದಿನಾಂಕ, ವಿದ್ಯಾರ್ಹತೆ ಮತ್ತು ಇತ್ಯಾದಿ ವಿವರಗಳನ್ನು ಭರ್ತಿ ಮಾಡಿ ಕೊನೆಯದಾಗಿ ಸ್ಕ್ಯಾನ್ ಮಾಡಿಟ್ಟುಕೊಂಡಿರುವ ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ, ಶೈಕ್ಷಣಿಕ ಅರ್ಹತೆಯ ಅಂಕಪಟ್ಟಿಗಳು, ಕೆಲಸ ಮಾಡಿದ ಅನುಭವದ ಪ್ರಮಾಣ ಪತ್ರ ಹಾಗೂ ಇತರೆ ಪ್ರಮಾಣ ಪತ್ರಗಳು, ಭಾವಚಿತ್ರ, ಸಹಿ ಮತ್ತು ಗುರುತಿನ ಚೀಟಿಯನ್ನು ಕಂಪ್ಯೂಟರ್ ಮುಖೇನ ಅಪ್‌ಲೋಡ್ (ಗಿಠಿಟಂಚಿಜ) ಮಾಡಬೇಕು. ಇಲ್ಲವಾದಲ್ಲಿ ಅಂತಹ ಅರ್ಜಿದಾರರು ಆನ್‌ಲೈನ್‌ನಲ್ಲಿ ಅರ್ಜಿಯನ್ನು ತುಂಬಿ ಮುಂದುವರೆಯಲು ಸಾಧ್ಯವಾಗುವುದಿಲ್ಲ. ಅರ್ಜಿದಾರ ನೀಡಿರುವ ವಿವರಗಳು ಎಲ್ಲಾ ರೀತಿಯಿಂದಲೂ ಸಮರ್ಪಕವಾಗಿದ್ದಲ್ಲಿ ಮಾತ್ರ ಚಲನ್ ಮುದ್ರಿಸಬಹುದು. ಚಲನ್ ಮುದ್ರಿಸಲು ಜನರೇಟ್ ಚಲನ್ ಬಟನ್ ಮೇಲೆ ಕ್ಲಿಕ್ ಮಾಡಿದಾಗ ತ್ರಿಪ್ರತಿ (ಖಿಡಿಃಟಿಟುಛಿಚಿಣಜ) ಬ್ಯಾಂಕ್ ಚಲನ್ ಸೃಜನೆಯಾಗುತ್ತದೆ. ಆ ಚಲನ್‌ನಲ್ಲಿ ಅರ್ಜಿಯ ಸಂಖ್ಯೆಯೊಂದಿಗೆ, ಆಯ್ಕೆ ಮಾಡಿರುವ ಹುದ್ದೆ / ವಿಭಾಗ, ನಿಮ್ಮ ಭಾವಚಿತ್ರ, ಪ್ರವರ್ಗ, ಮೀಸಲಾತಿಗಳ ವಿವರ ಮತ್ತು ಪಾವತಿಸಬೇಕಾಗಿರುವ ನಿಗದಿತ ಶುಲ್ಕಗಳ ವಿವರಗಳು ಇರುತ್ತವೆ. ಆ ಚಲನ್ ಪ್ರತಿಯನ್ನು ಮುದ್ರಿಸಿ/ಪ್ರಿಂಟ್ ಮಾಡಿಕೊಳ್ಳತಕ್ಕದ್ದು.

ನಂತರ ಅರ್ಜಿದಾರ ಮುದ್ರಿಸಿಕೊಳ್ಳಲಾದ ಚಲನ್‌ನಲ್ಲಿ ನಮೂದಾಗಿರುವ ಒಟ್ಟು ಶುಲ್ಕವನ್ನು **ಸ್ಥಳೀಯ ಅಂಚೆ ಕಛೇರಿಗಳಲ್ಲಿ ಅಥವಾ ಹೆಚ್.ಡಿ.ಎಫ್.ಸಿ ಬ್ಯಾಂಕಿನ ಅಧಿಕೃತ ಶಾಖೆಗಳಲ್ಲಿ ನಗದು ರೂಪದಲ್ಲಿ ಪಾವತಿಸಿ ನಂತರ ಚಲನ್‌ನ 'ಅಭ್ಯರ್ಥಿ ಪ್ರತಿ'ಯನ್ನು ಇಟ್ಟುಕೊಂಡಿರತಕ್ಕದ್ದು.**

ಅಭ್ಯರ್ಥಿಯು ಶುಲ್ಕ ಪಾವತಿಸಿದ ಎರಡು ದಿನಗಳ ನಂತರ ಪುನಃ ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in ನಲ್ಲಿ My Applicationನ್ನು ಕ್ಲಿಕ್ ಮಾಡಿ, ತಮ್ಮ ಅರ್ಜಿ ಸಂಖ್ಯೆ ಮತ್ತು ಜನ್ಮ ದಿನಾಂಕ ನಮೂದಿಸಿದ ನಂತರ ಅರ್ಜಿ ತೆರೆಯುತ್ತದೆ ಹಾಗೂ ಅಭ್ಯರ್ಥಿಯು ಭರ್ತಿ ಮಾಡಿರುವ ಎಲ್ಲಾ ವಿವರಗಳನ್ನು ಒಳಗೊಂಡಂತೆ ಅರ್ಜಿಯು ಸೃಜನೆಯಾಗುತ್ತದೆ, ಸದರಿ ಅರ್ಜಿಯ ಪ್ರತಿಯನ್ನು ಪ್ರಿಂಟ್ ಮಾಡಿಟ್ಟುಕೊಳ್ಳತಕ್ಕದ್ದು. ಅರ್ಜಿ ಪ್ರತಿ ಮತ್ತು ಅರ್ಜಿ ಸಂಖ್ಯೆಯು ಮುಂದಿನ ನೇಮಕಾತಿ ಪ್ರಕ್ರಿಯೆಯ ಎಲ್ಲಾ ಹಂತಗಳಿಗೆ ಅವಶ್ಯಕವಾಗಿರುತ್ತದೆ.

**ಪ್ರಮುಖ ದಿನಾಂಕಗಳ ಮಾಹಿತಿ:**

- **ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 20.02.2020 ಬೆಳಿಗ್ಗೆ 10.00 ಗಂಟೆಗೆ**
- **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 18.03.2020 ಸಂಜೆ 06.00 ಗಂಟೆಗೆ**
- **ಶುಲ್ಕವನ್ನು ಅಧಿಕೃತ ಬ್ಯಾಂಕ್ ಅಥವಾ ಅಂಚೆ ಕಛೇರಿಗಳ ವೇಳೆಯಲ್ಲಿ ಪಾವತಿಸಲು ಕೊನೆಯ ದಿನಾಂಕ: 20.03.2020.**

**ಸೂಚನೆ:**

- ಪೊಲೀಸ್ ಇಲಾಖೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ನೀಡಲಾಗಿರುವ ಅರ್ಜಿಯನ್ನು ನಿಗದಿತ ದಿನಾಂಕದೊಳಗೆ ಆನ್‌ಲೈನ್ ಮೂಲಕ ಭರ್ತಿ ಮಾಡಿ ಸಲ್ಲಿಸಿರುವ ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು.
- ತಪ್ಪು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಅಂತಹವರ ವಿರುದ್ಧ ಕಾನೂನಿನನ್ವಯ ನೇಮಕಾತಿ ಸಮಿತಿಯು ಸೂಕ್ತ ಕ್ರಮ ಕೈಗೊಳ್ಳುವುದು.
- ಆನ್‌ಲೈನ್ ಮೂಲಕ ಅರ್ಜಿಯನ್ನು ಭರ್ತಿಮಾಡುವ ಸಂದರ್ಭದಲ್ಲಿ ಸಮಸ್ಯೆ ಎದುರಾದಲ್ಲಿ ಸಹಾಯವಾಣಿ (ಊಜಟಠಿ ಟುಟಿಜ) 080–22943346 ಅನ್ನು ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆದು ಅರ್ಜಿ ಸಲ್ಲಿಸಬಹುದು. ಹಾಗೂ ತಾಂತ್ರಿಕ ತೊಂದರೆ ಎದುರಾದಲ್ಲಿ ಅದನ್ನು ಸ್ಥಗಿತಗೊಳಿಸಿ ಮತ್ತೊಮ್ಮೆ ಅಧಿಕೃತ ವೆಬ್‌ಸೈಟ್‌ನಲ್ಲಿ ನೀಡಲಾಗಿರುವ ಅರ್ಜಿಯನ್ನು ಭರ್ತಿ ಮಾಡಲು ತಿಳಿಸಲಾಗಿದೆ.

**ಈ ಕೆಳಗೆ ನಮೂದಿಸಿರುವ ಖಾಲಿ ಹುದ್ದೆಗಳ ಸಂಖ್ಯೆ ತಾತ್ಕಾಲಿಕವಾಗಿದ್ದು, ಅವಶ್ಯಕತೆ ಹಾಗೂ ಸಂದರ್ಭಕ್ಕೆ ಅನುಗುಣವಾಗಿ ಬದಲಾವಣೆ ಮಾಡಲಾಗುವುದು.**

| ಕ್ರಮ ಸಂಖ್ಯೆ | ವಿಭಾಗದ ಹೆಸರು | ಮೂಲ ವೃಂದದ ಖಾಲಿ ಹುದ್ದೆಗಳ ಸಂಖ್ಯೆ | ಹೈ-ಕ ಖಾಲಿ ಹುದ್ದೆಗಳ ಸಂಖ್ಯೆ |
|---|---|---|---|
| 1 | ರಸಾಯನಶಾಸ್ತ್ರ ವಿಭಾಗ | 07 | – |
| 2 | ನಾರ್‌ಕೋಟಿಕ್ಸ್ ವಿಭಾಗ | 05 | – |
| 3 | ಭೌತಶಾಸ್ತ್ರ ವಿಭಾಗ | 03 | – |
| 4 | ಡಿ.ಎನ್.ಎ ವಿಭಾಗ | 09 | – |
| 5 | ಪ್ರಶ್ನಿತ ವಿಭಾಗ | 05 | – |
| 6 | ಅಗ್ನಿ ಅಸ್ತ್ರ ವಿಭಾಗ | 05 | – |
| 7 | ಫೊರೆನ್ಸಿಕ್ ಮನೋವಿಜ್ಞಾನ | 04 | – |
| 8 | ಕಂಪ್ಯೂಟರ್ ಫೊರೆನ್ಸಿಕ್ ವಿಭಾಗ | 04 | – |
| 9 | ಮೊಬೈಲ್ ಪೊರೆನ್ಸಿಕ್ ವಿಭಾಗ | 04 | – |
| 10 | ಅಡಿಯೋ ವಿಡಿಯೋ ವಿಭಾಗ | 04 | – |
| 11 | ವಿಷ ವಿಜ್ಞಾನ ವಿಭಾಗ | – | 04 |
| | **ಒಟ್ಟು** | **50** | **04** |

(ಖಾಲಿ ಹುದ್ದೆಗಳ ವರ್ಗೀಕರಣದ ವಿವರವನ್ನು ಅನುಬಂಧ–1 ರಲ್ಲಿ ನೀಡಿದೆ)

**4. ಅರ್ಹತೆಗಳು:**

(ಎ) **ಅರ್ಹತಾ ಷರತ್ತುಗಳು** :

ು) ಭಾರತೀಯ ನಾಗರೀಕನಾಗಿರತಕ್ಕದ್ದು.

ುು) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ, ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

ುುು) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತನಾಗಿರಬೇಕು ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

೧೫) ಹೈದ್ರಬಾದ್–ಕರ್ನಾಟಕ ಮೀಸಲಾತಿಗೊಳಪಡುವ ಹುದ್ದೆಗಳಿಗೆ ಆಯ್ಕೆ ಬಯಸುವ ಅಭ್ಯರ್ಥಿಗಳು ಹೈದ್ರಬಾದ್–ಕರ್ನಾಟಕ ಪ್ರದೇಶದ ಸ್ಥಳೀಯ ವ್ಯಕ್ತಿಯಾಗಿರಬೇಕು.

**5. ವಯೋಮಿತಿ:**

**ಸಾಮಾನ್ಯ ಅಭ್ಯರ್ಥಿಗಳಿಗೆ:**

ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಂದರೆ 18.03.2020ಕ್ಕೆ ಅಭ್ಯರ್ಥಿಗೆ ಕನಿಷ್ಟ 21 ವರ್ಷ ವಯಸ್ಸಾಗಿರಬೇಕು ಹಾಗೂ ಈ ಕೆಳಕಂಡ **ಗರಿಷ್ಠ ವಯೋಮಿತಿ** ಮೀರಿರಬಾರದು.

| | |
|---|---|
| **ಸಾಮಾನ್ಯ ವರ್ಗ** | **35 ವರ್ಷ** |
| **2ಎ,2ಬಿ,3ಎ,3ಬಿ** | **38 ವರ್ಷ** |
| **ಪ.ಜಾ/ಪ.ಪಂ/ಪ್ರ–1** | **40 ವರ್ಷ** |

**6. ವಿದ್ಯಾರ್ಹತೆ:**

**1)** **ವೈಜ್ಞಾನಿಕ ಅಧಿಕಾರಿ, ರಸಾಯನಶಾಸ್ತ್ರ ವಿಭಾಗ:–** ಸ್ನಾತಕೋತ್ತರ ಪದವಿಯನ್ನು ಕೆಮಿಸ್ಟ್ರಿ /ಫಾರ್ಮಾಕೊಲಾಜಿ / ಬಯೋಕೆಮಿಸ್ಟ್ರಿ /ಫೋರೆನ್ಸಿಕ್ ಸೈನ್ಸ್ / ಕೆಮಿಕಲ್ ಸೈನ್ಸ್‌ನಲ್ಲಿ ತತ್ಸಮಾನ ವಿದ್ಯಾರ್ಹತೆಯ ವಿಷಯಗಳಲ್ಲಿ ಶೇಕಡ 55ರ ಸರಾಸರಿ ಅಂಕಗಳನ್ನು ಹೊಂದಿರಬೇಕು.

ಸರ್ಕಾರದಿಂದ ಅಂಗೀಕೃತವಾಗಿರುವ ಯಾವುದಾದರೂ ರೀಸರ್ಚ್ ಸಂಸ್ಥೆಯಲ್ಲಿ ರೀಸರ್ಚ್ ಸ್ಕಾಲರ್ ಆಗಿ 2 ವರ್ಷಕ್ಕಿಂತ ಕಡಿಮೆ ಇಲ್ಲದಂತೆ ಅನುಭವವನ್ನು ಹೊಂದಿರಬೇಕು.

**2)** **ವೈಜ್ಞಾನಿಕ ಅಧಿಕಾರಿ, ನಾರ್ಕೋಟಿಕ್ಸ್ ವಿಭಾಗ :–** ಸ್ನಾತಕೋತ್ತರ ಪದವಿಯನ್ನು ಕೆಮಿಸ್ಟ್ರಿ / ಫಾರ್ಮಕಾಲಜಿ / ಬಯೋಕೆಮಿಸ್ಟ್ರಿ /ಫೊರೆನ್ಸಿಕ್ ಸೈನ್ಸ್ / ತತ್ಸಮಾನ ವಿದ್ಯಾರ್ಹತೆಯನ್ನು ಕೆಮಿಕಲ್ ಸೈನ್ಸ್‌ಸ್ ಈ ವಿಷಯಗಳಲ್ಲಿ ಕನಿಷ್ಟ ಶೇಕಡ 55ರ ಸರಾಸರಿ ಅಂಕಗಳನ್ನು ಹೊಂದಿರಬೇಕು.

ಸರ್ಕಾರದಿಂದ ಅಂಗೀಕೃತವಾಗಿರುವ ಯಾವುದಾದರೂ ರೀಸರ್ಚ್ ಸಂಸ್ಥೆಯಲ್ಲಿ ರೀಸರ್ಚ್ ಸ್ಕಾಲರ್ ಆಗಿ 2 ವರ್ಷಕ್ಕಿಂತ ಕಡಿಮೆ ಇಲ್ಲದಂತೆ ಅನುಭವವನ್ನು ಹೊಂದಿರಬೇಕು.

**3)** **ವೈಜ್ಞಾನಿಕ ಅಧಿಕಾರಿ, ಭೌತಶಾಸ್ತ್ರ ವಿಭಾಗ:–** ಸ್ನಾತಕೋತ್ತರ ಪದವಿಯನ್ನು ಫಿಜಿಕ್ಸ್ /ಫೊರೆನ್ಸಿಕ್ ಸೈನ್ಸ್ / ಫಿಜಿಕಲ್ ಸೈನ್ಸ್ / ತತ್ಸಮಾನ ವಿದ್ಯಾರ್ಹತೆಯ ವಿಷಯಗಳಲ್ಲಿ ಶೇಕಡ 55ರ ಸರಾಸರಿ ಅಂಕಗಳನ್ನು ಹೊಂದಿರಬೇಕು.

ಸರ್ಕಾರದಿಂದ ಅಂಗೀಕೃತವಾಗಿರುವ ಯಾವುದಾದರೂ ರೀಸರ್ಚ್ ಸಂಸ್ಥೆಯಲ್ಲಿ ರೀಸರ್ಚ್ ಸ್ಕಾಲರ್ ಆಗಿ 2 ವರ್ಷಕ್ಕಿಂತ ಕಡಿಮೆ ಇಲ್ಲದಂತೆ ಅನುಭವವನ್ನು ಹೊಂದಿರಬೇಕು.

**4)** **ವೈಜ್ಞಾನಿಕ ಅಧಿಕಾರಿ, ಡಿಎನ್‌ಎ ವಿಭಾಗ:–** ಸ್ನಾತಕೋತ್ತರ ಪದವಿಯನ್ನು ಬಾಟನೀ / ಝುವಾಲಜಿ / ಭಯೋಕೆಮಿಸ್ಟ್ರಿ / ಮೈಕ್ರೋಬಯೋಲಜಿ / ಲೈಫ್‌ಸೈನ್ಸ್‌ಸ್ / ಫೊರೆನ್ಸಿಕ್ ಸೈನ್ಸ್ ಅಥವಾ ಬಯೋಸೈನ್ಸ್‌ಸ್ ತತ್ಸಮಾನ ವಿದ್ಯಾರ್ಹತೆಯ ವಿಷಯಗಳಲ್ಲಿ ಶೇಕಡ 55ರ ಸರಾಸರಿ ಅಂಕಗಳನ್ನು ಹೊಂದಿರಬೇಕು.

ಸರ್ಕಾರದಿಂದ ಅಂಗೀಕೃತವಾಗಿರುವ ಯಾವುದಾದರೂ ರೀಸರ್ಚ್ ಸಂಸ್ಥೆಯಲ್ಲಿ ರೀಸರ್ಚ್ ಸ್ಕಾಲರ್ ಆಗಿ 2 ವರ್ಷಕ್ಕಿಂತ ಕಡಿಮೆ ಇಲ್ಲದಂತೆ ಅನುಭವವನ್ನು ಹೊಂದಿರಬೇಕು.

**5)** **ವೈಜ್ಞಾನಿಕ ಅಧಿಕಾರಿ, ಪ್ರಶ್ನಿತ ದಾಸ್ತಾವೇಜು ವಿಭಾಗ :–** ಸ್ನಾತಕೋತ್ತರ ಪದವಿಯನ್ನು ಭೌತಶಾಸ್ತ್ರ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಫಿಜಿಕಲ್‌ಸೈನ್ಸ್‌ಸ್‌ನಲ್ಲಿ / ಕೆಮಿಸ್ಟ್ರಿ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಕೆಮಿಕಲ್ ಸೈನ್ಸ್‌ಸ್‌ನಲ್ಲಿ / ಫೊರೆನ್ಸಿಕ್ ಸೈನ್ಸ್ ಅಥವಾ ತತ್ಸಮಾನ ವಿದ್ಯಾರ್ಹತೆ ಈ ವಿಷಯಗಳಲ್ಲಿ ಕನಿಷ್ಟ ಶೇಕಡ 55ರ ಸರಾಸರಿ ಅಂಕಗಳೊಂದಿಗೆ ತೇರ್ಗಡೆಯಾಗಿರಬೇಕು.

ಸರ್ಕಾರದಿಂದ ಅಂಗೀಕೃತವಾಗಿರುವ ಯಾವುದಾದರೂ ರೀಸರ್ಚ್ ಸಂಸ್ಥೆಯಲ್ಲಿ ರೀಸರ್ಚ್ ಸ್ಕಾಲರ್ ಆಗಿ 2 ವರ್ಷಕ್ಕಿಂತ ಕಡಿಮೆ ಇಲ್ಲದಂತೆ ಅನುಭವವನ್ನು ಹೊಂದಿರಬೇಕು.

6) **<u>ವೈಜ್ಞಾನಿಕ ಅಧಿಕಾರಿ, ಅಗ್ನಿ ಅಸ್ತ್ರ ವಿಭಾಗ:-</u>** ಸ್ನಾತಕೋತ್ತರ ಪದವಿಯನ್ನು ಫಿಜಿಕ್ಸ್ /ಫೊರೆನ್ಸಿಕ್ ಸೈನ್ಸ್ / ಫಿಜಿಕಲ್ ಸೈನ್ಸ್‌ನಲ್ಲಿ ತತ್ಸಮಾನ ವಿದ್ಯಾರ್ಹತೆಯ ವಿಷಯಗಳಲ್ಲಿ ಶೇಕಡ 55ರ ಸರಾಸರಿ ಅಂಕಗಳನ್ನು ಹೊಂದಿರಬೇಕು.

ಸರ್ಕಾರದಿಂದ ಅಂಗೀಕೃತವಾಗಿರುವ ಯಾವುದಾದರೂ ರೀಸರ್ಚ್ ಸಂಸ್ಥೆಯಲ್ಲಿ ರೀಸರ್ಚ್ ಸ್ಕಾಲರ್ ಆಗಿ 2 ವರ್ಷಕ್ಕಿಂತ ಕಡಿಮೆ ಇಲ್ಲದಂತೆ ಅನುಭವವನ್ನು ಹೊಂದಿರಬೇಕು.

7) **<u>ವೈಜ್ಞಾನಿಕ ಅಧಿಕಾರಿ, ಮನೋವಿಜ್ಞಾನ ವಿಭಾಗ:-</u>** ಸೈಕೋಲಾಜಿಯಲ್ಲಿ ಎಂಎಸ್‌ಸಿ ಸ್ನಾತಕೋತ್ತರ ಪದವಿಯನ್ನು ಹೊಂದಿರಬೇಕು ಅಥವಾ ಇದರ ತತ್ಸಮಾನ ವಿದ್ಯಾರ್ಹತೆ / ಫೊರೆನ್ಸಿಕ್ ಸೈಕೋಲಾಜಿಯಲ್ಲಿ ವಿಷಯ ತಜ್ಞರಾಗಿರಬೇಕು / ಕ್ಲಿನಿಕಲ್ ಸೈಕೋಲಾಜಿ ವಿಷಯಗಳಲ್ಲಿ ಕನಿಷ್ಟ ಶೇಕಡ 55ರ ಸರಾಸರಿ ಅಂಕಗಳನ್ನು ಹೊಂದಿರಬೇಕು.

ಸರ್ಕಾರದಿಂದ ಅಂಗೀಕೃತವಾಗಿರುವ ಯಾವುದಾದರೂ ರೀಸರ್ಚ್ ಸಂಸ್ಥೆಯಲ್ಲಿ ರೀಸರ್ಚ್ ಸ್ಕಾಲರ್ ಆಗಿ 2 ವರ್ಷಕ್ಕಿಂತ ಕಡಿಮೆ ಇಲ್ಲದಂತೆ ಅನುಭವವನ್ನು ಹೊಂದಿರಬೇಕು.

8) **<u>ವೈಜ್ಞಾನಿಕ ಅಧಿಕಾರಿ, ಕಂಪ್ಯೂಟರ್ ಫೊರೆನ್ಸಿಕ್ ವಿಭಾಗ:-</u>** ಕಂಪ್ಯೂಟರ್ ಸೈನ್ಸ್‌ನಲ್ಲಿ ಸ್ನಾತಕೋತ್ತರ ಪದವಿಯನ್ನು ಹೊಂದಿರಬೇಕು / ಎಲೆಕ್ಟ್ರಾನಿಕ್ಸ್ / ಫಿಜಿಕ್ಸ್ /ಫೊರೆನ್ಸಿಕ್ ಸೈನ್ಸ್ / ಇನ್‌ಫಾರ್‌ಮೆಶನ್ ಸೈನ್ಸ್ ಅಥವಾ ಟೆಕ್ನಾಲಾಜಿ / ತತ್ಸಮಾನ ವಿದ್ಯಾರ್ಹತೆಯನ್ನು ಫಿಜಿಕಲ್ ಸೈನ್ಸ್‌ಸ್ ಈ ವಿಷಯಗಳಲ್ಲಿ ಕನಿಷ್ಟ ಶೇಕಡ 55ರ ಸರಾಸರಿ ಅಂಕಗಳನ್ನು ಹೊಂದಿರಬೇಕು

**ಅಥವಾ**

ಯಾವುದೇ ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಕಂಪ್ಯೂಟರ್ ಸೈನ್ಸ್‌ನಲ್ಲಿ ಎಂಟೆಕ್ ಪದವಿಯನ್ನು ಹೊಂದಿರಬೇಕು / ಎಲೆಕ್ಟ್ರಾನಿಕ್ಸ್ / ಇನ್‌ಫಾರ್‌ಮೆಶನ್ ಸೈನ್ಸ್ ಅಥವಾ ಟೆಕ್ನಾಲಾಜಿ / ಟೆಲಿ ಕಮ್ಯೂನಿಕೇಷನ್ / ತತ್ಸಮಾನ ವಿದ್ಯಾರ್ಹತೆ ಈ ವಿಷಯಗಳಲ್ಲಿ ಕನಿಷ್ಟ ಶೇಕಡ 55ರ ಸರಾಸರಿ ಅಂಕಗಳನ್ನು ಹೊಂದಿರಬೇಕು **ಜೊತೆಗೆ**

ಸರ್ಕಾರದಿಂದ ಅಂಗೀಕೃತವಾಗಿರುವ ಯಾವುದಾದರೂ ರೀಸರ್ಚ್ ಸಂಸ್ಥೆಯಲ್ಲಿ ರೀಸರ್ಚ್ ಸ್ಕಾಲರ್ ಆಗಿ 2 ವರ್ಷಕ್ಕಿಂತ ಕಡಿಮೆ ಇಲ್ಲದಂತೆ ಅನುಭವವನ್ನು ಹೊಂದಿರಬೇಕು.

9) **<u>ವೈಜ್ಞಾನಿಕ ಅಧಿಕಾರಿ, ಮೊಬೈಲ್ ಫೊರೆನ್ಸಿಕ್ ವಿಭಾಗ:-</u>** ಸ್ನಾತಕೋತ್ತರ ಪದವಿಯಲ್ಲಿ ಕಂಪ್ಯೂಟರ್ ಸೈನ್ಸ್ / ಎಲೆಕ್ಟ್ರಾನಿಕ್ಸ್ / ಫಿಜಿಕ್ಸ್ /ಫೊರೆನ್ಸಿಕ್ ಸೈನ್ಸ್ / ಇನ್‌ಫಾರ್‌ಮೆಶನ್ ಸೈನ್ಸ್ ಅಥವಾ ಟೆಕ್ನಾಲಾಜಿ / ಫಿಜಿಕಲ್ ಸೈನ್ಸ್‌ಸ್‌ನಲ್ಲಿ ತತ್ಸಮಾನ ವಿದ್ಯಾರ್ಹತೆ ಈ ವಿಷಯಗಳಲ್ಲಿ ಕನಿಷ್ಟ ಶೇಕಡ 55ರ ಸರಾಸರಿ ಅಂಕಗಳನ್ನು ಹೊಂದಿರಬೇಕು.

**ಅಥವಾ**

ಯಾವುದೇ ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಎಂಟೆಕ್ ಪದವಿಯನ್ನು ಕಂಪ್ಯೂಟರ್ ಸೈನ್ಸ್ / ಎಲೆಕ್ಟ್ರಾನಿಕ್ಸ್ / ಇನ್‌ಫಾರ್‌ಮೆಶನ್ ಸೈನ್ಸ್ ಅಥವಾ ಟೆಕ್ನಾಲಾಜಿ / ಟೆಲಿ ಕಮ್ಯೂನಿಕೇಷನ್ / ತತ್ಸಮಾನ ವಿದ್ಯಾರ್ಹತೆ ಈ ವಿಷಯಗಳಲ್ಲಿ ಕನಿಷ್ಟ ಶೇಕಡ 55ರ ಸರಾಸರಿ ಅಂಕಗಳನ್ನು ಹೊಂದಿರಬೇಕು **ಜೊತೆಗೆ**

ಸರ್ಕಾರದಿಂದ ಅಂಗೀಕೃತವಾಗಿರುವ ಯಾವುದಾದರೂ ರೀಸರ್ಚ್ ಸಂಸ್ಥೆಯಲ್ಲಿ ರೀಸರ್ಚ್ ಸ್ಕಾಲರ್ ಆಗಿ 2 ವರ್ಷಕ್ಕಿಂತ ಕಡಿಮೆ ಇಲ್ಲದಂತೆ ಅನುಭವವನ್ನು ಹೊಂದಿರಬೇಕು.

10) **<u>ವೈಜ್ಞಾನಿಕ ಅಧಿಕಾರಿ, ಆಡಿಯೋ ವಿಡಿಯೋ ಫೊರೆನ್ಸಿಕ್ ವಿಭಾಗ:-</u>** ಸ್ನಾತಕೋತ್ತರ ಪದವಿಯನ್ನು ಕಂಪ್ಯೂಟರ್ ಸೈನ್ಸ್ / ಎಲೆಕ್ಟ್ರಾನಿಕ್ಸ್ / ಫಿಜಿಕ್ಸ್ /ಫೊರೆನ್ಸಿಕ್ ಸೈನ್ಸ್ / ಇನ್‌ಫಾರ್‌ಮೆಶನ್ ಸೈನ್ಸ್ ಅಥವಾ ಟೆಕ್ನಾಲಾಜಿ / ಫಿಜಿಕಲ್ ಸೈನ್ಸ್‌ಸ್‌ನಲ್ಲಿ ತತ್ಸಮಾನ ವಿದ್ಯಾರ್ಹತೆ ಈ ವಿಷಯಗಳಲ್ಲಿ ಕನಿಷ್ಟ ಶೇಕಡ 55ರ ಸರಾಸರಿ ಅಂಕಗಳನ್ನು ಹೊಂದಿರಬೇಕು

**ಅಥವಾ**

ಯಾವುದೇ ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಎಂಟೆಕ್ ಪದವಿಯನ್ನು ಕಂಪ್ಯೂಟರ್ ಸೈನ್ಸ್ / ಎಲೆಕ್ಟ್ರಾನಿಕ್ಸ್ / ಇನ್‌ಫಾರ್ಮೆಶನ್ ಸೈನ್ಸ್ ಅಥವಾ ಟೆಕ್ನಾಲಾಜಿ / ಟೆಲಿ ಕಮ್ಯೂನಿಕೇಷನ್ / ತತ್ಸಮಾನ ವಿದ್ಯಾರ್ಹತೆ ಈ ವಿಷಯಗಳಲ್ಲಿ ಕನಿಷ್ಟ ಶೇಕಡ 55ರ ಸರಾಸರಿ ಅಂಕಗಳನ್ನು ಹೊಂದಿರಬೇಕು **ಜೊತೆಗೆ**
ಸರ್ಕಾರದಿಂದ ಅಂಗೀಕೃತವಾಗಿರುವ ಯಾವುದಾದರೂ ರೀಸರ್ಚ್ ಸಂಸ್ಥೆಯಲ್ಲಿ ರೀಸರ್ಚ್ ಸ್ಕಾಲರ್ ಆಗಿ 2 ವರ್ಷಕ್ಕಿಂತ ಕಡಿಮೆ ಇಲ್ಲದಂತೆ ಅನುಭವವನ್ನು ಹೊಂದಿರಬೇಕು.

11. **ವೈಜ್ಞಾನಿಕ ಅಧಿಕಾರಿ, ವಿಷ ವಿಜ್ಞಾನ ವಿಭಾಗ:–**
ಸ್ನಾತಕೋತ್ತರ ಪದವಿಯನ್ನು ಕೆಮಿಸ್ಟ್ರಿ /ಫಾರ್ಮಾಕೊಲಾಜಿ / ಬಯೋಕೆಮಿಸ್ಟ್ರಿ /ಫೊರೆನ್ಸಿಕ್ ಸೈನ್ಸ್ / ಕೆಮಿಕಲ್ ಸೈನ್ಸ್‌ನಲ್ಲಿ ತತ್ಸಮಾನ ವಿದ್ಯಾರ್ಹತೆಯ ವಿಷಯಗಳಲ್ಲಿ ಶೇಕಡ 55ರ ಸರಾಸರಿ ಅಂಕಗಳನ್ನು ಹೊಂದಿರಬೇಕು.

ಸರ್ಕಾರದಿಂದ ಅಂಗೀಕೃತವಾಗಿರುವ ಯಾವುದಾದರೂ ರೀಸರ್ಚ್ ಸಂಸ್ಥೆಯಲ್ಲಿ ರೀಸರ್ಚ್ ಸ್ಕಾಲರ್ ಆಗಿ 2 ವರ್ಷಕ್ಕಿಂತ ಕಡಿಮೆ ಇಲ್ಲದಂತೆ ಅನುಭವವನ್ನು ಹೊಂದಿರಬೇಕು.

**7. ಲಿಖಿತ ಪರೀಕ್ಷೆ:** ಅರ್ಹ ಅಭ್ಯರ್ಥಿಗಳಿಗೆ 150 ಅಂಕಗಳಿಗೆ ವಸ್ತುನಿಷ್ಠ ಮಾದರಿಯ ಎರಡು ಪತ್ರಿಕೆಗಳನ್ನೊಳಗೊಂಡ ಸ್ಪರ್ಧಾತ್ಮಕ ಲಿಖಿತ ಪರೀಕ್ಷೆಯನ್ನು ನಡೆಸಲಾಗುವುದು.

**ಎ) ಪತ್ರಿಕೆ–1: ಸಾಮಾನ್ಯ ಪತ್ರಿಕೆ–** ಸಾಮಾನ್ಯ ಅಧ್ಯಯನ, ಸಾಮಾನ್ಯ ವಿಜ್ಞಾನ ಮತ್ತು ವಿಧಿ ವಿಜ್ಞಾನ ಪ್ರಯೋಗಾಲಯಗಳಿಗೆ ಸಂಬಂಧಿಸಿದ ಎಲ್ಲಾ ವಿಷಯಾಧಾರಿತ ಪ್ರಶ್ನೆಗಳನ್ನು ಒಳಗೊಂಡಿರುತ್ತದೆ–75 ಅಂಕಗಳು [ಸಮಯ: 01 ಗಂಟೆ 30 ನಿಮಿಷಗಳು]

**ಬಿ) ಪತ್ರಿಕೆ–2: ನಿರ್ಧಿಷ್ಠ ಪತ್ರಿಕೆ–** ವಿಷಯಾಧಾರಿತ ಪ್ರಶ್ನೆ ಪತ್ರಿಕೆಯಾಗಿದ್ದು, ಆಯಾ ವಿಷಯಗಳಿಗೆ ಸಂಬಂಧಿಸಿದ ಪ್ರಶ್ನೆಗಳನ್ನು ಒಳಗೊಂಡಿರುತ್ತದೆ –75 ಅಂಕಗಳು [ಸಮಯ: 01 ಗಂಟೆ 30 ನಿಮಿಷಗಳು]

ಸಿ) ಯಾವುದೇ ರೀತಿಯ ಋಣಾತ್ಮಕ ಅಂಕಗಳು ಇರುವುದಿಲ್ಲ.

**8. ಪಠ್ಯಕ್ರಮ:** ಪ್ರತಿ ಹುದ್ದೆಗೆ ನಿಗದಿಪಡಿಸಲಾಗಿರುವ ವಿದ್ಯಾರ್ಹತೆಯನುಸಾರ ಪಠ್ಯಕ್ರಮವನ್ನು ತಯಾರಿಸಿ, ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in ನಲ್ಲಿ ಪ್ರಕಟಿಸಲಾಗುವುದು.

**9. ಆಯ್ಕೆ ವಿಧಾನ:**

ಎ) ಸದರಿ ಅಧಿಸೂಚನೆಯಲ್ಲಿ ನಮೂದಿಸಿದ ಖಾಲಿ ಹುದ್ದೆಗಳ ವರ್ಗೀಕರಣವು ಈಗಾಗಲೇ ಜಾರಿಯಲ್ಲಿರುವ ಸೇವಾ ನಿಯಮಾವಳಿಗಳು ಹಾಗೂ ಅಧಿಸೂಚನೆ ನಿಯಮಗಳನ್ನೊಳಗೊಂಡಿರುತ್ತದೆ ಹಾಗೂ ನ್ಯಾಯಾಲಯದ ತೀರ್ಪುಗಳ ಹಾಗೂ ಸರ್ಕಾರದ ಅಧಿಸೂಚನೆಗಳ ಮೇರೆಗೆ ಬದಲಾವಣೆಗೆ ಒಳಪಟ್ಟಿರುತ್ತದೆ.

ಬಿ) ಆಯ್ಕೆ ಸಮಿತಿಯು ಸ್ವೀಕರಿಸಲಾಗುವ ಅರ್ಜಿಗಳನ್ನು ಪರಿಶೀಲಿಸಿದ ನಂತರ ಅಭ್ಯರ್ಥಿಗಳು ನೀಡಲಾಗಿರುವ ವಿವರ ಮತ್ತು ಕೋರಲಾಗಿರುವ ಮೀಸಲಾತಿಗಳು ಸರಿಯಿದೆ ಎಂದು ಖಾತ್ರಿ ಪಡಿಸಿದ ಮೇಲೆ ಅಧಿಸೂಚನೆಯಲ್ಲಿ ಪ್ರಕಟಿಸಿದಂತೆ ಅಭ್ಯರ್ಥಿಗಳು ಲಿಖಿತ ಪರೀಕ್ಷೆಯಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಮತ್ತು ಹಾಲಿ ಚಾಲ್ತಿಯಲ್ಲಿರುವ ನಿಯಮ ಆದೇಶಗಳನ್ವಯ, ಮೀಸಲಾತಿಗಳನುಸಾರ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಇಬ್ಬರು ಅಥವಾ ಹೆಚ್ಚು ಅಭ್ಯರ್ಥಿಗಳು ಗಳಿಸಿದ ಅಂಕಗಳು ಒಂದೇ ಆಗಿದ್ದಲ್ಲಿ ಅಂತಹ ಸಂದರ್ಭದಲ್ಲಿ ವಯಸ್ಸಿನ ಆಧಾರದ ಮೇಲೆ ಅಂದರೆ ವಯಸ್ಸಿನಲ್ಲಿ ಹಿರಿಯರಾದವರು ಕಿರಿಯರಿಗಿಂತ ಶ್ರೇಣಿಯಲ್ಲಿ ಮೇಲಿರುತ್ತಾರೆ.

ಸಿ) ಅಭ್ಯರ್ಥಿಗಳು ಎಲ್ಲಾ ವಿಧದಿಂದ ಅರ್ಹತೆ ಹೊಂದಿದ್ದಲ್ಲಿ ಮಾತ್ರ ಆಯ್ಕೆಗೆ ಪರಿಗಣಿಸಲಾಗುವುದು.

ಡಿ) ಹೊರ ರಾಜ್ಯದ ಅಭ್ಯರ್ಥಿಗಳು ಕರ್ನಾಟಕ ಸಿವಿಲ್ ಸೇವೆಗಳು (ನೇಮಕಾತಿ) (ಕನ್ನಡ ಭಾಷಾ ಪರೀಕ್ಷೆ) ನಿಯಮಗಳು, 1984ರ 2ನೇ ನಿಯಮದ ಪ್ರಕಾರ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗದ ಹೊರತು ನೇಮಕ ಹೊಂದಲು ಅರ್ಹರಾಗುವುದಿಲ್ಲ.

**10. ಖಾಯಂಪೂರ್ವ ಅವಧಿ ಮತ್ತು ವೇತನ ಶ್ರೇಣಿ :**

**ಎ) ಖಾಯಂಪೂರ್ವ ಅವಧಿ:** ಎರಡು ವರ್ಷ

**ಬಿ) ವೇತನ ಶ್ರೇಣಿ:**

'. 40900–1100–46400–1250–53900–1450–62600–1650–72500–1900–78200.

**ಸಿ) ಪಿಂಚಣಿ ಸೌಲಭ್ಯ:** ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ(ಎಸ್‌ಪಿಎಲ್) 04 ಪಿಇಟಿ 2005, ದಿನಾಂಕ:31.03.2006ರಂತೆ. ನೂತನ ಅಂಶದಾಯಿ ಪಿಂಚಣಿ ಸೌಲಭ್ಯ ಅನ್ವಯವಾಗುವುದು.

**11. ಜಾತಿ ಮೀಸಲಾತಿ ಪ್ರಮಾಣ ಪತ್ರಗಳು :**

ಜಾತಿ ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ಈ ಕೆಳಕಂಡ ನಮೂನೆಗಳಲ್ಲಿ ಪ್ರಮಾಣ ಪತ್ರವನ್ನು ಅರ್ಜಿ ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.

ಎ) ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶಿಲ್ದಾರ್ ರವರಿಂದ ಪಡೆದ ನಮೂನೆ–ಡಿ ಪ್ರಮಾಣ ಪತ್ರ.

ಬಿ) ಪ್ರವರ್ಗ – 1 ವರ್ಗದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ಪಡೆದ ನಮೂನೆ–ಇ ಪ್ರಮಾಣ ಪತ್ರ.

ಸಿ) ಪ್ರವರ್ಗ– 2ಎ, 2ಬಿ, 3ಎ, 3ಬಿ ವರ್ಗದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ಪಡೆದ ನಮೂನೆ – ಎಫ್ ಪ್ರಮಾಣ ಪತ್ರ.

**ಸೂಚನೆ** : ನಮೂನೆ – ಎಫ್ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ:18.03.2020ಕ್ಕೆ ಐದು ವರ್ಷಕ್ಕಿಂತ ಹಳೆಯದಾಗಿರಬಾರದು.

**12. ಗ್ರಾಮೀಣ ಮೀಸಲಾತಿ ಅಭ್ಯರ್ಥಿ :**

ಎ) ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಯು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಗ್ರಾಮೀಣ ಪ್ರದೇಶದಲ್ಲಿ ವಿದ್ಯಾಭ್ಯಾಸ ಹೊಂದಿರಬೇಕು, **ಮತ್ತು**

ಬಿ) ಅಭ್ಯರ್ಥಿಯು ವ್ಯಾಸಂಗ ಮಾಡಿದ ಸ್ಥಳವು **ವ್ಯಾಸಂಗ ಮಾಡಿದ ಅವಧಿಯಲ್ಲಿ** ಅಂದಿನ ಕರ್ನಾಟಕ ಪೌರ ನಿಗಮಗಳ ಅಧಿನಿಯಮ 1976ರ ಅಥವಾ ಕರ್ನಾಟಕ ಪೌರಸಭೆಗಳ ಅಧಿನಿಯಮ, 1964ರ ಅಡಿಯಲ್ಲಿ ನಿರ್ದಿಷ್ಟ ಪಡಿಸಿದ ಒಂದು ದೊಡ್ಡ ನಗರ ಪ್ರದೇಶ, ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆಯ ಹಂತದಲ್ಲಿರುವ ಪ್ರದೇಶಗಳ ಹೊರತಾಗಿ ಇತರ ಯಾವುದೇ ಪ್ರದೇಶದಲ್ಲಿರುವ ಶಾಲೆಯಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಯಾಗಿರಬೇಕು, **ಮತ್ತು**

ಸಿ) ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಯು ಕರ್ನಾಟಕ ಅಧಿಸೂಚನೆ ಸಂಖ್ಯೆ. ಸಿಆಸುಇ:08:ಸೆನೆನಿ:2001, ದಿನಾಂಕ 13.02.2001ರ ಪ್ರಕಾರ ಮೇಲೆ ಪರಿಭಾಷಿಸಿದಂತೆ ತರಗತಿ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಪ್ರದೇಶದಲ್ಲಿ ವಿದ್ಯಾಭ್ಯಾಸ ಹೊಂದಿರುವವರು ಸರ್ಕಾರಿ ಆದೇಶ ಸಂಖ್ಯೆ. ಸಿಆಸುಇ/96/ಸೆನೆನಿ/2005, ದಿನಾಂಕ 10.08.2005ರಲ್ಲಿ ನಿಗದಿಪಡಿಸಿದ ನಮೂನೆ–2ರ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಶಾಲಾ ಮುಖ್ಯೋಪಾಧ್ಯಾಯರಿಂದ ಸಹಿ ಮಾಡಿಸಿ ಮತ್ತು ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆಯುವುದು. ನಮೂನೆ–1 (ನಾನ್–ಕ್ರೀಮಿ ಲೇಯರ್) ಮತ್ತು ನಮೂನೆ–2 ಇವುಗಳು ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ಅಭ್ಯರ್ಥಿಗಳಿಗೆ ಕಡ್ಡಾಯವಾಗಿರುತ್ತದೆ).

ಡಿ) ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, 2ಬಿ, 3ಎ, 3ಬಿ ಸೇರಿದ ಅಭ್ಯರ್ಥಿಗಳು ನಮೂನೆ–2ರಲ್ಲಿ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದು ಸಲ್ಲಿಸುವುದು.

**ಸೂಚನೆ:** ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, ಪ್ರವರ್ಗ–2ಬಿ, ಪ್ರವರ್ಗ–3ಎ, ಪ್ರವರ್ಗ–3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹ ಅಭ್ಯರ್ಥಿಗಳು ಓಂಟಿ–ಅಡಿಜಚಿಟಥಿ ಐಚಿಥಿಜಡಿ ಪ್ರಮಾಣ ಪತ್ರವನ್ನು ಹೊಂದಿರದಿದ್ದಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

**13. ಅಂಗವಿಕಲ ಅಭ್ಯರ್ಥಿ :**

ಸರ್ಕಾರಿ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 50 ಎಸ್‌ಆರ್‌ಆರ್ 2000, ದಿನಾಂಕ: 03.09.2005 ಮತ್ತು ದಿನಾಂಕ: 01.08.2009 ರಲ್ಲಿ ದೃಷ್ಟಿ ಮಾಂದ್ಯ, ಶ್ರವಣ ದೋಷವುಳ್ಳ, ಚಲನವಲನ ವೈಕಲ್ಯ, ಕುಷ್ಠರೋಗದಿಂದ ಗುಣಮುಖರಾದ ಮತ್ತು ಬುದ್ಧಿ ಮಾಂದ್ಯಂತೆ/ಮಾನಸಿಕ ಅಸ್ವಸ್ಥತೆ (Low vision, Hearing impairment, locomotor disability Leprosy

cured, Mental retardation & Mental illness) ವೈಕಲ್ಯತೆಯೆಂದು ಪರಿಗಣಿಸಿದ್ದು, ಶೇ.40ಕ್ಕೆ ಕಡಿಮೆ ಇಲ್ಲದಂತೆ ಬಳಲುತ್ತಿರುವ ವ್ಯಕ್ತಿಗಳು.

ಅಂಗವಿಕಲರಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿನಾಂಕ: 19.11.2005ರ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ:ಸಿಆಸುಇ 115 ಸೆನೆನಿ 2005ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ, ಅಂಗವಿಕಲತೆಯ ಬಗ್ಗೆ ಜಿಲ್ಲಾಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು. ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಪರಿಗಣಿಸುವುದಿಲ್ಲ.

## 14. ಹೈದರಾಬಾದ್–ಕರ್ನಾಟಕ ಮೀಸಲಾತಿಯ ಸಲುವಾಗಿ ಪಡೆಯಬೇಕಾಗಿರುವ ಪ್ರಮಾಣ ಪತ್ರ:

ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ ಮೀಸಲಾತಿಯನ್ನು ಕ್ಲೇಮು ಮಾಡುವ ಅರ್ಜಿದಾರರು ಒಂದು ಸ್ವಯಂ ಘೋಷಿತ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು. ಪರಂತು ಅರ್ಜಿ ಸಲ್ಲಿಸುವ ದಿನಾಂಕದಂದು ಅರ್ಜಿದಾರರು ಸ್ಥಳೀಯ ವ್ಯಕ್ತಿಯೆಂದು ಅರ್ಹತೆ ಪಡೆಯುವುದು ಕಡ್ಡಾಯವಾಗಿರುತ್ತದೆ. ತಾತ್ಕಾಲಿಕವಾಗಿ ಆಯ್ಕೆಗೊಂಡ ಅಭ್ಯರ್ಥಿಗಳು ದಾಖಲಾತಿ ಪರೀಕ್ಷೆಗಳ ಸಮಯದಲ್ಲಿ ಸಕ್ಷಮ ಪ್ರಾಧಿಕಾರದಿಂದ ನೀಡಲಾದ ಅರ್ಹತಾ ಪ್ರಮಾಣ ಪತ್ರ (ಅನುಬಂಧ–ಎ) ನೀಡತಕ್ಕದ್ದು. ಅರ್ಹತಾ ಪ್ರಮಾಣ ಪತ್ರದಲ್ಲಿ ಸಕ್ಷಮ ಪ್ರಾಧಿಕಾರಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಲಾದ ಅಂತಿಮ ದಿನಾಂಕದಂದು ಅಭ್ಯರ್ಥಿಯು ಸಾರ್ವಜನಿಕ ಉದ್ಯೋಗ ಆದೇಶದಂತೆ ಸ್ಥಳೀಯ ವ್ಯಕ್ತಿಯೆಂದು ಅರ್ಹತೆ ಪಡೆದಿರುತ್ತಾನೆಂದು ಒಂದು ಅಡಿ ಟಿಪ್ಪಣಿಯನ್ನು ದಾಖಲಿಸುವುದು.

**ಸೂಚನೆ:–**

ಎ) ಅರ್ಹತಾ ಪ್ರಮಾಣ ಪತ್ರವನ್ನು ಪಡೆದಿರಬೇಕು ಹಾಗೂ ನೇಮಕಾತಿ ಸಮಿತಿಯು ನಡೆಸುವ ದಾಖಲೆಗಳ ಪರಿಶೀಲನೆಯ ಸಂದರ್ಭಧಲ್ಲಿ ಸಿಂಧುವಾಗಿರಬೇಕು.

ಬಿ) ಹೈದ್ರಬಾದ್–ಕರ್ನಾಟಕ ಮೀಸಲಾತಿಗೆ ಸಂಬಂಧಿಸಿದ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುತ್ತದೆ.

ಸಿ) ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಸಲ್ಲಿಸುವ ಅರ್ಜಿಯೊಂದಿಗೆ ಪ್ರಮಾಣ ಪತ್ರಗಳನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡತಕ್ಕದ್ದು ಹಾಗೂ ನೇಮಕಾತಿ ಸಮಿತಿಯು ಪರಿಶೀಲನೆಗಾಗಿ ಹಾಜರುಪಡಿಸಲು ಸೂಚಿಸಿದಾಗ ಅರ್ಜಿಯಲ್ಲಿ ನಮೂದಿಸಿರುವ ಹಾಗೂ ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲಾಗಿರುವ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದ್ದಲ್ಲಿ ಕೆಳಕಂಡ ಕ್ರಮ ಕೈಗೊಳ್ಳಲಾಗುವುದು.

ಡಿ) ವಿವಿಧ ಮೀಸಲಾತಿ ಕೋರಿ ಹಾಜರು ಪಡಿಸಬೇಕಾದ ಪ್ರಮಾಣ ಪತ್ರಗಳನ್ನು ಹಾಜರು ಪಡಿಸದಿದ್ದಲ್ಲಿ, ಆ ಮೀಸಲಾತಿಯನ್ನು ರದ್ದು ಪಡಿಸಲಾಗುವುದು ಹಾಗೂ ಕೋರಲಾದ ಜಾತಿ/ಪಂಗಡ/ಪ್ರವರ್ಗಕ್ಕೆ ಸಂಬಂಧಿಸಿದಂತೆ, ಪ್ರಮಾಣ ಪತ್ರವನ್ನು ಹಾಜರುಪಡಿಸದಿದ್ದಲ್ಲಿ ಅಂತಹ ಅಭ್ಯರ್ಥಿಯ ಅಭ್ಯರ್ಥಿತನವನ್ನು ಸಾಮಾನ್ಯ ವರ್ಗದಡಿಯಲ್ಲಿ ಅರ್ಹತೆ ಹೊಂದಿದ್ದಲ್ಲಿ ಮಾತ್ರ ಸಾಮಾನ್ಯ ಅರ್ಹತೆಯ ಅಭ್ಯರ್ಥಿಯೆಂದು ಪರಿಗಣಿಸಲಾಗುವುದು.

## 15. ಪ್ರಮುಖವಾದ ಸೂಚನೆಗಳು :

ಈ ಕೆಳಕಂಡ ಪ್ರಮಾಣ ಪತ್ರಗಳನ್ನು ದಾಖಲಾತಿಗಳನ್ನು ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಸಿಂಧುವಾಗಿರುವಂತೆ ಪಡೆದಿಟ್ಟುಕೊಂಡಿದ್ದು, ದೃಢೀಕೃತ ದಾಸ್ತಾವೇಜುಗಳ ಪ್ರತಿಗಳನ್ನು ದಾಖಲಾತಿ ಪರಿಶೀಲನೆಯ ಸಂದರ್ಭದಲ್ಲಿ ತಪ್ಪದೇ ಹಾಜರುಪಡಿಸತಕ್ಕದ್ದು.

ಎ) ಎಸ್.ಎಸ್.ಎಲ್.ಸಿ. : ವರ್ಗಾವಣೆ ಪತ್ರ (ಜನ್ಮ ದಿನಾಂಕದ ವಿವರದೊಂದಿಗೆ)

ಬಿ) ಸರ್ಕಾರಿ ಇಲಾಖೆಯಲ್ಲಿ/ರಾಜ್ಯ ಸರ್ಕಾರದ/ಕೇಂದ್ರ ಸರ್ಕಾರದ ಯಾವುದೇ ಪ್ರಾಧಿಕಾರದಲ್ಲಿ/ರಾಜ್ಯ ಅಥವಾ ಕೇಂದ್ರ ಸರ್ಕಾರದ ಸಾರ್ವಜನಿಕ ಸ್ವಾಮ್ಯದ ಕಂಪನಿಗಳಲ್ಲಿ ಪ್ರಸ್ತುತ ಉದ್ಯೋಗಿಯಾಗಿದ್ದಲ್ಲಿ ಅಂತಹವರು ಇಲಾಖಾ ವತಿಯಿಂದ ಕರ್ತವ್ಯದಿಂದ ಬಿಡುಗಡೆ ಮಾಡುವ ಬಗ್ಗೆ ಇಚ್ಛಾ ಅನುಮತಿ ಪತ್ರ.

ಸಿ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, 2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿ ಅಭ್ಯರ್ಥಿಗಳು ನಮೂನೆ ಡಿ/ಇ/ಎಫ್ ನಲ್ಲಿ ತಹಶೀಲ್ದಾರ್‌ರಿಂದ ಪಡೆದ ಪ್ರಮಾಣ ಪತ್ರಗಳನ್ನು ಪಡೆದಿಟ್ಟುಕೊಂಡಿರತಕ್ಕದ್ದು.

ಡಿ) ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿರಬೇಕು.

ಇ) ಅಂಗವಿಕಲ ಅಭ್ಯರ್ಥಿಗಳು ಸಂಬಂಧಪಟ್ಟ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪಡೆದ ವೈದ್ಯಕೀಯ ಪ್ರಮಾಣ ಪತ್ರ.

ಎಫ್) ಕರ್ನಾಟಕ ಸಿವಿಲ್ ಸೇವೆಗಳು (ನೇಮಕಾತಿ) (ಕನ್ನಡ ಭಾಷಾ ಪರೀಕ್ಷೆ) ನಿಯಮಗಳು, 1984ರ 2ನೇ ನಿಯಮದ ಪ್ರಕಾರ ದಿನಾಂಕ: 08.08.1986ರ ಹಾಗೂ ನಂತರ 'ಸಿ' ವರ್ಗದ ಹುದ್ದೆಗಳಿಗೆ ಆಯ್ಕೆಯಾದ ಯಾವುದೇ ಅಭ್ಯರ್ಥಿಯು ಸರ್ಕಾರವು ವಿಶೇಷ ಅಥವಾ ಸಾಮಾನ್ಯ ಹಾಗೂ ಕಾಲ ಕಾಲಕ್ಕೆ ಹೊರಡಿಸುವ ಆದೇಶದಲ್ಲಿ ನಿಗದಿಪಡಿಸುವ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗದ ಹೊರತು ನೇಮಕ ಹೊಂದಲು ಅರ್ಹನಾಗುವುದಿಲ್ಲ.

**16. <u>ನೇಮಕಾತಿ ಅನರ್ಹತೆ</u>** :

ಈ ಕೆಳಗೆ ತಿಳಿಸಿರುವ ಯಾವ ವ್ಯಕ್ತಿಯೂ ಈ ಅಧಿಸೂಚನೆಯಲ್ಲಿ ವಿವರಿಸಿದ ಹುದ್ದೆಗಳಿಗೆ ಅರ್ಹರಾಗಿರುವುದಿಲ್ಲ.

ಎ) ಭಾರತದ ಪೌರ: ಅಥವಾ

ಬಿ) ನೇಪಾಳದ ಪ್ರಜೆ ಅಥವಾ

ಸಿ) ಭೂತಾನದ ಪ್ರಜೆ ಅಥವಾ

ಡಿ) ಭಾರತದಲ್ಲಿ ಖಾಯಂ ಆಗಿ ನೆಲೆಸುವ ಉದ್ದೇಶದಿಂದ 1962 ಜನವರಿ 1ನೇ ದಿನಾಂಕಕ್ಕೆ ಮೊದಲು ಭಾರತಕ್ಕೆ ಬಂದಿರುವ ಟಿಬೆಟಿಯನ್ ನಿರಾಶ್ರಿತರ ಅಥವಾ

ಇ) ಪಾಕಿಸ್ತಾನ, ಮ್ಯಾನ್ಮಾರ (ಬರ್ಮಾ) ಶ್ರೀಲಂಕಾ ಅಥವಾ ಪೂರ್ವ ಆಫ್ರಿಕದ ರಾಷ್ಟ್ರಗಳಾದ ಕೆನ್ಯಾ, ಉಗಾಂಡಾ, ತಾಂಜಾನಿಯಾ ಸಂಯುಕ್ತ ಗಣರಾಜ್ಯ (ಹಿಂದಿನ ಟಾಂಗೋನಿಕಾ ಅಂಝೀಬಾರ) ಝಾಂಬಿಯಾ ಮಾಲ್ವಿ, ಝೈರ್ಸ್, ಇಥಿಯೋಫಿಯಾ ಅಥವಾ ವಿಯೆಟ್ನಾಗಳಿಗೆ ವಲಸೆ ಹೋದ ಭಾರತೀಯ ಮೂಲದ ವ್ಯಕ್ತಿ.

ಎಫ್) ಒಬ್ಬರಿಗಿಂತ ಹೆಚ್ಚು ಜೀವಂತ ಪತ್ನಿಯರನ್ನು ಹೊಂದಿದ ಪುರುಷ ಅಭ್ಯರ್ಥಿಗಳು ಸರ್ಕಾರದ ಪೂರ್ವಾನುಮತಿ ಇಲ್ಲದೆ ನೇಮಕಾತಿಗೆ ಅರ್ಹರಾಗಿರುವುದಿಲ್ಲ.

ಜಿ) ಯಾವುದೇ ಅಭ್ಯರ್ಥಿಯು ತಮ್ಮ ಅಭ್ಯರ್ಥಿತನಕ್ಕೆ ಯಾವುದೇ ಅಧಿಕೃತ ಅಥವಾ ಅನಧಿಕೃತ ಬಾಹ್ಯ ಒತ್ತಡ ತರಲು ಪ್ರಯತ್ನಿಸಿದಲ್ಲಿ ಅವರು ನೇಮಕಾತಿಗೆ ಅರ್ಹರಾಗಿರುವುದಿಲ್ಲ.

ಹೆಚ್) ಯಾವುದೇ ಅಭ್ಯರ್ಥಿಯು ಅಭ್ಯರ್ಥಿತನದ ಬಗ್ಗೆ ಸರ್ಕಾರಿ ಅಥವಾ ಸರ್ಕಾರೇತರ ಬಾಹ್ಯ ಬೆಂಬಲ ಪಡೆಯುವ ಪ್ರಯತ್ನ ನಡೆಸಿದರೆ, ಅಂತಹ ಅಭ್ಯರ್ಥಿಯು ನೇಮಕಾತಿಗೆ ಅರ್ಹನಾಗುವುದಿಲ್ಲ.

ಐ) ಯಾವುದೇ ಅಭ್ಯರ್ಥಿಯು ಅರ್ಜಿ ಹಾಕುವ ಸಮಯದಲ್ಲಿ ಯಾವುದೇ ಸರ್ಕಾರಿ ಇಲಾಖೆಯಲ್ಲಿ ಅಥವಾ ಯಾವುದೇ ರಾಜ್ಯ ಸರ್ಕಾರದ ಅಥವಾ ಕೇಂದ್ರ ಸರ್ಕಾರದ ಅಥವಾ ಸರ್ಕಾರದ ಯಾವುದೇ ಪ್ರಾಧಿಕಾರದಲ್ಲಿ ಖಾಯಂ ಅಥವಾ ತಾತ್ಕಾಲಿಕ ನೌಕರಿಯಲ್ಲಿದ್ದಲ್ಲಿ ಅಂತಹವರು ಸಂದರ್ಭಾನುಸಾರ, ಎಲ್ಲಿ ಸೇವೆ ಸಲ್ಲಿಸುತ್ತಿದ್ದಾರೋ ಆಯಾ ಇಲಾಖೆ ಮುಖ್ಯಸ್ಥರು ಅಥವಾ ಸರ್ಕಾರದ ಅಥವಾ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೇ ಅರ್ಜಿ ಸಲ್ಲಿಸಿದಲ್ಲಿ ಅವರು ನೇಮಕಾತಿಗೆ ಅರ್ಹರಾಗಿರುವುದಿಲ್ಲ. ಪರಂತು, ಇದು ಸರ್ಕಾರದ ಯಾವುದೇ ಇಲಾಖೆಯಲ್ಲಿ ಸ್ಥಳೀಯ ಅಭ್ಯರ್ಥಿಯಾಗಿ ನೇಮಕ ಹೊಂದಿದಲ್ಲಿ, ಅವರನ್ನು ಅಂತೆಯೇ ಪರಿಗಣಿಸುವವರೆಗೆ, ಅನ್ವಯಿಸುವುದಿಲ್ಲ.

ಜೆ) ಕೆಳಕಾಣಿಸಿದ ಯಾವುದೇ ವ್ಯಕ್ತಿಗಳು ಹುದ್ದೆಗೆ ನೇಮಕಾತಿಯಾಗಲು ಅರ್ಹರಲ್ಲ, ಒಂದು ವೇಳೆ ಅವರು,
ಕಾನೂನು ಬಾಹಿರವಾದ ಸಂಸ್ಥೆಯೆಂದು ಅಥವಾ ಸಂಘವೆಂದು ಘೋಷಿಸಲಾದಂತಹ ಯಾವುದೇ ಸಂಸ್ಥೆಯ ಅಥವಾ ಸಂಘದ ಸದಸ್ಯರಾಗಿದ್ದರೆ ಅಥವಾ ಸ್ವಂತ ಅಥವಾ ಬೇರೆಯವರ ಸಂಬಂಧ ಹೊಂದಿದಲ್ಲಿ ಅಥವಾ ಸಂಪರ್ಕ ಹೊಂದಿದಲ್ಲಿ ಅಥವಾ

**ಕೆಳಕಂಡ ಯಾವುದೇ ಚಟುವಟಿಕೆ ಅಥವಾ ಕಾರ್ಯಕ್ರಮದಲ್ಲಿ ಭಾಗವಹಿಸಿದರೆ ಅಥವಾ ಸಂಪರ್ಕವಿಟ್ಟುಕೊಂಡಿದ್ದರೆ,**

ಕೆ) ಭಾರತ ಸಂವಿಧಾನವನ್ನು ಬುಡಮೇಲು ಮಾಡುವ ಉದ್ದೇಶವನ್ನು ಹೊಂದಿರುವ

ಎಲ್) ಹಿಂಸಾತ್ಮಕ ಕೃತ್ಯವೂ ಒಳಗೊಂಡ ಸಂಘಟಿತದ ಕಾನೂನು ಉಲ್ಲಂಘನೆ ಅಥವಾ ಪ್ರತಿಭಟನೆಯ ಉದ್ದೇಶ ಹೊಂದಿರುವ

ಎಂ) ಭಾರತದ ಪರಮಾಧಿಕಾರದ ಮತ್ತು ಸಮಗ್ರತೆಯ ಹಿತಾಸಕ್ತಿಗಳಿಗೆ ಅಥವಾ ರಾಜ್ಯ ಭದ್ರತೆಗೆ ಪ್ರತಿಕೂಲವಾದ ಉದ್ದೇಶವನ್ನು ಹೊಂದಿರುವ ಅಥವಾ

ಎನ್) ಧರ್ಮ, ಕುಲ, ಭಾಷೆ, ಜಾತಿ ಅಥವಾ ಕೋಮುಗಳ ಆಧಾರದ ಮೇಲೆ ವಿವಿಧ ವರ್ಗಗಳ ಜನರ ನಡುವೆ ದ್ವೇಷ ಅಥವಾ ಹಗೆತನದ ಭಾವನೆಗಳನ್ನು ಪ್ರಚೋದಿಸುವ ಅಥವಾ

ಓ) ಭಾರತ ಸರ್ಕಾರದ ಅಥವಾ ಯಾವುದೇ ರಾಜ್ಯ ಸರ್ಕಾರದ ಸೇವೆಯಿಂದ ವಜಾ ಆಗಿರುವವರು.

ಪಿ) ಯಾವುದೇ ವ್ಯಕ್ತಿ ಕ್ರಿಮಿನಲ್ ಮೊಕದ್ದಮೆಯಲ್ಲಿ ಶಿಕ್ಷೆಗೆ ಗುರಿಯಾಗಿರಬಾರದು ಹಾಗೂ ಕೇಂದ್ರ ಅಥವಾ ಯಾವುದೇ ರಾಜ್ಯ ಲೋಕಸೇವಾ ಆಯೋಗದವರು ನಡೆಸುವ ಯಾವುದೇ ಪರೀಕ್ಷೆಗಳಿಗೆ ಅಥವಾ ಆಯ್ಕೆಗಳಿಗೆ ಹಾಜರಾಗುವುದರಿಂದ, ತಾತ್ಕಾಲಿಕವಾಗಿ ಬಹಿಷ್ಕರಿಸಿದ್ದರೆ ಅಥವಾ ಖಾಯಂ ಆಗಿ ಅನರ್ಹಗೊಂಡಿದ್ದರೆ ಅಥವಾ ಬಹಿಷ್ಕರಿಸಿದ್ದರೆ. ಸರ್ಕಾರವು ಈ ಎಲ್ಲಾ ಸಂದರ್ಭಗಳನ್ನು ಪುನರಾವಲೋಕಿಸಿ ಈ ನೇಮಕಾತಿಗೆ ಅರ್ಹನೆಂದು ಪರಿಗಣಿಸುವವರೆಗೆ ಸಾಧಾರಣವಾಗಿ ನೇಮಕಾತಿಗೆ ಅರ್ಹರಾಗಿರುವುದಿಲ್ಲ.

ಕ್ಯೂ) ಕ್ರಿಮಿನಲ್ ಅಪರಾಧ ಮೊಕದ್ದಮೆಗಳಲ್ಲಿ ಒಳಗೊಂಡ ಅಭ್ಯರ್ಥಿಯನ್ನು ಅನರ್ಹರೆಂದು ಪರಿಗಣಿಸಲಾಗುವುದು.

17. **ವಿಶೇಷ ಸೂಚನೆಗಳು** :

ಎ) ಅರ್ಹ ಅಭ್ಯರ್ಥಿಗಳು ಮೂಲ ದಾಖಲಾತಿಗಳ ಪರಿಶೀಲನಾ ಸಂದರ್ಭದಲ್ಲಿ ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ಮಾಹಿತಿಗಳಿಗೆ ಪೂರಕವಾಗಿ ಸದರಿ ದಾಖಲಾತಿ / ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸಬೇಕು, ತಪ್ಪಿದ್ದಲ್ಲಿ ಅಂತಹ ಮೀಸಲಾತಿಯನ್ನು ರದ್ದುಪಡಿಸಲಾಗುವುದು.

ಬಿ) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಕ್ಕೆ ಅಂದರೆ 18.03.2020ಕ್ಕೆ ಮೊದಲು ಅಭ್ಯರ್ಥಿಗಳು ಹುದ್ದೆಗೆ ನಿಗದಿಪಡಿಸಿದ ಶೈಕ್ಷಣಿಕ ವಿದ್ಯಾರ್ಹತೆ ಹಾಗೂ ಅನುಭವಗಳನ್ನು ಹೊಂದಿರಬೇಕು.

ಸಿ) **ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯಲ್ಲಿ ನಮೂದಿಸಿರುವ ಮಾಹಿತಿ / ವಿವರಗಳ ಆಧಾರದ ಮೇರೆಗೆ ಅವರ ಅರ್ಹತೆಯನ್ನು ಪರಿಗಣಿಸಿರುವುದರಿಂದ, ಅಭ್ಯರ್ಥಿಗಳು ಅರ್ಜಿಗಳನ್ನು ತುಂಬುವಾಗ ಯಾವುದೇ ತಪ್ಪು ಅಥವಾ ಸುಳ್ಳು ಮಾಹಿತಿ ನೀಡಬಾರದು. ತಪ್ಪು ಅಥವಾ ಸುಳ್ಳು ಮಾಹಿತಿ ನೀಡಿದ್ದಲ್ಲಿ ಅದಕ್ಕೆ ಅಭ್ಯರ್ಥಿಗಳೇ ಜವಾಬ್ದಾರರಾಗಿರುತ್ತಾರೆ.** ಆದ್ದರಿಂದ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಮೀಸಲಾತಿ ಇತ್ಯಾದಿಗಳಿಗೆ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ. ಪೂರ್ಣ ಮಾಹಿತಿ ನೀಡದ ಅಥವಾ ತಪ್ಪು ಮಾಹಿತಿ ನೀಡಿದ, ಶುಲ್ಕ ಪಾವತಿಸದ ಮತ್ತು ಅಭ್ಯರ್ಥಿಯ ಸಹಿ ಇಲ್ಲದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಡಿ) ಒಂದು ವೇಳೆ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನದಂದು ಅರ್ಜಿಗಳನ್ನು ಸ್ವೀಕರಿಸಲಾಗುವುದು. ಆದರೆ ವಯೋಮಿತಿ ಹಾಗೂ ಕನಿಷ್ಠ ಶೈಕ್ಷಣಿಕ ವಿದ್ಯಾರ್ಹತೆಯ ಪರಿಗಣನೆಗೆ ದಿನಾಂಕ: 18.03.2020ಕ್ಕೆ ಮಾತ್ರ ಅನ್ವಯವಾಗುತ್ತದೆ.

ಇ) ಅಭ್ಯರ್ಥಿಯು ಅರ್ಜಿಯನ್ನು ಸಮರ್ಪಕವಾಗಿ ತುಂಬದೇ ಸದರಿ ಅರ್ಜಿ ತಿರಸ್ಕೃತವಾದಲ್ಲಿ ತತ್ಸಂಬಂಧ ಯಾವುದೇ ರೀತಿಯ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

ಎಫ್) ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ಅಭ್ಯರ್ಥಿಗಳ ಅನರ್ಹತೆ ಬಗ್ಗೆ ಪತ್ತೆಯಾದಲ್ಲಿ ಅಂತಹ ಅಭ್ಯರ್ಥಿಗಳನ್ನು ಅನರ್ಹರೆಂದು ಪರಿಗಣಿಸಲಾಗುವುದು.

ಜಿ) ಕರ್ನಾಟಕ ರಾಜ್ಯದ, ಕೇಂದ್ರ ಸರ್ಕಾರದ ಯಾವುದೇ ಸರ್ಕಾರಿ ಹಾಗೂ ಅರೆ ಸರ್ಕಾರಿ ಸಂಸ್ಥೆಯ ಸೇವೆಯಿಂದ ವಜಾ ಗೊಂಡಿರುವ ನೌಕರರು ನೇಮಕಾತಿಗೆ ಅರ್ಹರಲ್ಲ.

ಹೆಚ್) ಸುಳ್ಳು ಮಾಹಿತಿ ಅಥವಾ ನಕಲಿ ಪ್ರಮಾಣ ಪತ್ರ / ದಾಖಲಾತಿಗಳನ್ನು ಸಲ್ಲಿಸಿ ನೌಕರಿ ಪಡೆಯುವುದು ಯಾವುದೇ ಸಂದರ್ಭದಲ್ಲಿ ಕಂಡು ಬಂದಲ್ಲಿ, ಅದೇ ಹಂತದಲ್ಲಿ ಅವರನ್ನು ಯಾವುದೇ ಮುನ್ಸೂಚನೆ ನೀಡದೆ ಅವರ ಅಭ್ಯರ್ಥಿತನವನ್ನು ರದ್ದುಗೊಳಿಸುವುದರ ಜೊತೆಗೆ ಅವರ ವಿರುದ್ಧ ಕಾನೂನು ರೀತಿಯ ಕ್ರಮ ತೆಗೆದುಕೊಳ್ಳಲಾಗುವುದು.

ಐ) ಅಭ್ಯರ್ಥಿಯು ಹುದ್ದೆಗೆ ಅರ್ಜಿ ಸಲ್ಲಿಸಿದ ತಕ್ಷಣ ತಾನು ನಿಯಮ ಮತ್ತು ವಿನಿಯಮಗಳಿಗೆ (ಖಣಟಜ & ಖಜಗಣಟಚಿಣಉಂಟ) ಬದ್ಧನಾಗಿರುತ್ತಾನೆ ಎಂದು ಭಾವಿಸಲಾಗಿರುತ್ತದೆ. ಒಂದು ವೇಳೆ ತಾನು ಸದರಿ ಹುದ್ದೆಗೆ ಆಯ್ಕೆಯಾಗದ ಪಕ್ಷದಲ್ಲಿ ತದನಂತರ ಅದೇ ನಿಯಮಗಳನ್ನು ಪ್ರಶ್ನಿಸಲು ಬರುವುದಿಲ್ಲ.

ಜೆ) ಕೆ.ಸಿ.ಎಸ್. (ಸಾಮಾನ್ಯ ನೇಮಕಾತಿ) ನಿಯಮಗಳು 1977ರಲ್ಲಿ ನಿರ್ದಿಷ್ಟಗೊಳಿಸಿರುವಂತೆ ಆಯ್ಕೆಯಾದ ಅಭ್ಯರ್ಥಿಯು ನೇಮಕಾತಿ ಆದೇಶ ನೀಡುವ ಮುನ್ನ ಪೂರ್ಣ ಪ್ರಮಾಣದ ವೈದ್ಯಕೀಯ ಪರೀಕ್ಷೆಗೆ ಒಳಗಾಗಬೇಕಾಗುತ್ತದೆ. ವೈದ್ಯಕೀಯ ಪರೀಕ್ಷೆಯಲ್ಲಿ ವಿಫಲರಾದ ಅಭ್ಯರ್ಥಿಗಳನ್ನು ಅನರ್ಹ ಗೊಳಿಸಲಾಗುವುದು.

ಕೆ) ಅಂತಿಮವಾಗಿ ಆಯ್ಕೆಯಾದ ಅಭ್ಯರ್ಥಿಯು ಕರ್ನಾಟಕ ರಾಜ್ಯದ ಯಾವುದೇ ಭಾಗದಲ್ಲಿ ಸೇವೆ ಸಲ್ಲಿಸಲು ಸಿದ್ಧನಾಗಿರಬೇಕು.

ಎಲ್) ಅಭ್ಯರ್ಥಿಗಳು ವೈಜ್ಞಾನಿಕ ಅಧಿಕಾರಿ–2019–20 ನೇಮಕಾತಿ ಸಹಾಯವಾಣಿ ಸಂಖ್ಯೆ. 080–22943346ನ್ನು ಸಂಪರ್ಕಿಸಿ ನೇಮಕಾತಿಗೆ ಸಂಬಂಧಿಸಿದ ಪ್ರಶ್ನೆಗಳನ್ನು ಸ್ಪಷ್ಟ ಪಡಿಸಿಕೊಳ್ಳಬಹುದು. ಈ ಸಹಾಯವಾಣಿ ದಿನಾಂಕ:20.02.2020 ರಿಂದ ಪ್ರತಿದಿನ ಬೆಳಿಗ್ಗೆ 10–00 ರಿಂದ ಸಾಯಂಕಾಲ 6–00 ಗಂಟೆಯವರೆಗೆ ಲಭ್ಯವಿರುತ್ತದೆ. ಅಲ್ಲದೆ ಮೇಲಿಂದ ಮೇಲೆ ನೇಮಕಾತಿಗೆ ಸಂಬಂಧಪಟ್ಟಂತೆ ಬರುವ ಸಾಮಾನ್ಯ ಪ್ರಶ್ನೆಗಳಿಗೆ (ಈಡಿಜಡಣಜಟಣಥಿ ಂಞಜಜ ಕಿಣಜಣಉಂಟ – ಈಂಕಿ) ಉತ್ತರವನ್ನು www.ksp.gov.inಪೊಲೀಸ್ ವೆಬ್‌ಸೈಟ್‌ನಲ್ಲಿ ನೋಡಬಹುದು.

ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್,
(ನೇಮಕಾತಿ) ಮತ್ತು ಅಧ್ಯಕ್ಷರು,
ನ್ಯಾಯ ವಿಜ್ಞಾನ ಪ್ರಯೋಗಾಲಯಗಳು,
ವೈಜ್ಞಾನಿಕ ಅಧಿಕಾರಿಗಳ ವಿಶೇಷ ಆಯ್ಕೆ ಸಮಿತಿ,
ಕಾರ್ಲಟನ್ ಭವನ, ಅರಮನೆ ರಸ್ತೆ,
ಬೆಂಗಳೂರು–560 001.

**(ಪ.ಜಾ/ಪ.ಪಂ ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ – ಡಿ**

(ನಿಯಮ 3ಎ (2) (3) ನೋಡಿ)

**ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ /ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ**

**ಪ್ರಮಾಣ ಪತ್ರ**

...................................................... ರಾಜ್ಯದ / ಕೇಂದ್ರಾಡಳಿತ ಪ್ರದೇಶದ * ........................... ಜಿಲ್ಲೆಯ/ ವಿಭಾಗದ ........................................ ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ .............. ಎಂಬುವವರ ಮಗ / ಮಗಳಾದ ಶ್ರೀ /

ಶ್ರೀಮತಿ ................................................ ಇವರು ಅನುಸೂಚಿತ ಜಾತಿ / ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ / ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

* ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ರಾಜ್ಯ ಪುನರ್ ರಚನಾ ಅಧಿ ನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲಕ ತಿದ್ದುಪಡಿಯಾದಂತೆ).

* ಸಂವಿಧಾನ
* ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956
* ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿದಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.
* ಸಂವಿಧಾನ (ದಾದರ್ ಮತ್ತು ನಾಗರಹವೇಲಿ) ಅನುಸೂಚಿತ ಜಾತಿಗಳ ಆದೇಶ, 1962
* ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967
* ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ / ಬುಡಕಟ್ಟುಗಳ ಆದೇಶ 1988
* ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ / ಶ್ರೀಮತಿ / ಕುಮಾರಿ* ........................................................................................................ ಮತ್ತು / ಅಥವಾ ಅವನ* / ಅವಳ* ಕುಟುಂಬವು ........................................................................................ ರಾಜ್ಯ / ಕೇಂದ್ರಾಡಳಿತ ಪ್ರದೇಶದ ............................................... ಜಿಲ್ಲಾ / ವಿಭಾಗದ ........................... ಗ್ರಾಮ / ಪಟ್ಟಣದ ಸಾಮಾನ್ಯ ನಿವಾಸಿ (ಗಳು)

ಸಹಿ ..................................................

ತಹಶೀಲ್ದಾರ್..................................................

ಸ್ಥಳ : ಪದನಾಮ

ದಿನಾಂಕ : ಕಛೇರಿಯ ಮೊಹರಿನೊಂದಿಗೆ

**ರಾಜ್ಯ / ಕೇಂದ್ರಾಡಳಿತ ಪ್ರದೇಶ***

**ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟು ಬಿಡಿ / ಹೊಡೆದು ಹಾಕಿ**

ಸೂಚನೆ : ಇಲ್ಲಿ ಉಪಯೋಗಿಸಿದ ‘‘ಸಾಮಾನ್ಯ ನಿವಾಸಿಗಳು’’ ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ.

ಭಾರತ ಸರ್ಕಾರದ ಪತ್ರ ಸಂಖ್ಯೆ. ಬಿಸಿ 12028 / 2/ 76–ಎಸ್‌ಸಿಟಿ–1 ಗೃಹ ಮಂತ್ರಾಲಯದ ಅನುಸಾರವಾಗಿ, ಅಂಥ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ) ಪತ್ರ ಸಂಖ್ಯೆ 13.02.74 ಇಎಸ್‌ಟಿ (ಎಸ್‌ಸಿಟಿ) ದಿನಾಂಕ 5ನೇ ಆಗಸ್ಟ್ 1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ

ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ, ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

**(ಪ್ರವರ್ಗ – 1ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ – ಇ**

(ನಿಯಮ 3ಎ (2) (3) ನೋಡಿ)

**ಹಿಂದುಳಿದ ವರ್ಗಗಳಿಗೆ (ಪ್ರ.ವರ್ಗ–1) ಸೇರಿದ ಅಭ್ಯರ್ಥಿಗೆ ನೀಡುವ ಪ್ರಮಾಣ ಪತ್ರ**

.................................................................................................................... ಗ್ರಾಮ / ಪಟ್ಟಣದ / ನಗರ ನಿವಾಸಿಯಾದ ಶ್ರೀ / ಶ್ರೀಮತಿ .................................................................................................................. ಇವರ ಮಗ / ಮಗಳು / ಪತ್ನಿ / ಪತಿಯಾದ ಶ್ರೀ / ಶ್ರೀಮತಿ .................................................................................................... ಇವರು ಹಿಂದುಳಿದ ವರ್ಗಗಳ (ಪ್ರವರ್ಗ) ..................................................................... ಜಾತಿಯ ............................................. ಉಪ ಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ : ತಹಶೀಲ್ದಾರರು

ದಿನಾಂಕ : ............................ ತಾಲ್ಲೂಕು

ಕಛೇರಿಯ ಮೊಹರು

**(ಪ್ರವರ್ಗ – 2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ – ಎಫ್**

(ನಿಯಮ 3ಎ (2) (3)ನ್ನು ನೋಡಿ)

**ಹಿಂದುಳಿದ ವರ್ಗಗಳಿಗೆ (2ಎ, 2ಬಿ, 3ಎ, 3ಬಿ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಆದಾಯ ಮತ್ತು**

**ಜಾತಿ ಪ್ರಮಾಣ ಪತ್ರ**

.................................................................... ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ .................................................. ಇವರ ಮಗ / ಮಗಳು / ಪತಿ / ಪತ್ನಿಯಾದ ಶ್ರೀ/ಶ್ರೀಮತಿ/ಕುಮಾರಿ .......................................... ಇವರು ಮತ್ತು ಆತನ / ಅವಳ ತಂದೆ / ತಾಯಿ / ಪೋಷಕರು/ಪತ್ನಿ/ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ. ಎಸ್‌ಡಬ್ಲ್ಯೂಡಿ 225 ಬಿಸಿಎ 2000, ದಿನಾಂಕ 30.03.2002ರಲ್ಲಿ ನಿರ್ದಿಷ್ಟ ಪಡಿಸಿದ ಮೇಲುಸ್ತರದ (ಕ್ರಿಮಿ ಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು ;

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ/ಪೋಷಕರಾಗಲಿ / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು ;

ಅಥವಾ

ಸಾರ್ವಜನಿಕ ವಲಯ ಉದ್ಯಮದಲ್ಲಿ ತತ್ಸಮಾನವಾದ ಹುದ್ದೆಯನ್ನು ಹೊಂದಿರುವುದಿಲ್ಲ ;

ಅಥವಾ

ಖಾಸಗಿ ನಿಯೋಜಕರ ಕೈಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ ರೂ. 11400–21600/– ಪ್ರಾರಂಬಿಕ ಹಂತ) ಕಡಿಮೆಯಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು

ಅಥವಾ

ಆತನ/ಆಕೆಯ ತಂದೆ ತಾಯಿ/ಪೋಷಕರು/ಪತ್ನಿ/ಪತಿಯ ಆದಾಯವು ಎಂಟು ಲಕ್ಷ ಮೀರುವುದಿಲ್ಲವೆಂದು ;

ಅಥವಾ

ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961ರಲ್ಲಿ ನಿಗದಿಪಡಿಸಿರುವಂತೆ ಆತನ/ಆಕೆಯ ತಂದೆ ತಾಯಿ/ಪೋಷಕರು/ಪತ್ನಿ/ಪತಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ/ಆಕೆಯ ತಂದೆ ತಾಯಿ/ಪೋಷಕ/ಪತ್ನಿ/ಪತಿಯು ಅಥವಾ ಇವರಿಬ್ಬರೂ 10 ಯುನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 25 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಶನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣಿಕರಿಸಲಾಗಿದೆ. ಸರ್ಕಾರಿ ಆದೇಶ ಸಂಖ್ಯೆ. ಎಸ್‌ಡಬ್ಲ್ಯೂಡಿ 225 ಬಿಸಿಎ 2000, ದಿನಾಂಕ 30.03.2002ರ ಅನ್ವಯ ಶ್ರೀ/ಶ್ರೀಮತಿ/ಕುಮಾರಿ .................................... ಇವರು ......................................... ಜಾತಿಗೆ .......................................... ಸೇರಿದ ಉಪಜಾತಿಯವರಾಗಿದ್ದು ಸರ್ಕಾರಿ ಆದೇಶ ಸಂಖ್ಯೆ. ಎಸ್‌ಡಬ್ಲ್ಯೂಡಿ 225 ಬಿಸಿಎ 2000, ದಿನಾಂಕ 30.03.2002ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ ................................ (2ಎ, 2ಬಿ, 3ಎ, 3ಬಿ) ಸೇರಿರುತ್ತಾರೆ.

ಸ್ಥಳ : ತಹಶೀಲ್ದಾರರು

ದಿನಾಂಕ : ............................ ತಾಲ್ಲೂಕು

ಕಛೇರಿಯ ಮೊಹರು

**ನಮೂನೆ–1**

**ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ**

(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)

ಇವರಿಗೆ:

ತಹಶೀಲ್ದಾರರು,

.................... ತಾಲ್ಲೂಕು,

.................... ಜಿಲ್ಲೆ.

ಮಾನ್ಯರೆ,

ಶ್ರೀ / ಶ್ರೀಮತಿ ...................................................... ಎಂಬುವವರ ಮಗ/ಮಗಳು/ಪತಿ/ಪತ್ನಿ............................. ಆದ ನಾನು ಮೇಲುಸ್ತರದಲ್ಲಿ (ಅಡಿಜಚಿಟಥಿ ಐಚಿಥಿಜಡಿ) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :
2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :
   ತಾಲ್ಲೂಕು :
   ಜಿಲ್ಲೆ :
3. ಅಭ್ಯರ್ಥಿಯು ಹುಟ್ಟಿದ ದಿನಾಂಕ ವಯಸ್ಸು ಮತ್ತು ಹುಟ್ಟಿದ ಸ್ಥಳ :
4. ಅಭ್ಯರ್ಥಿಯ ತಂದೆ/ತಾಯಿ/ಪೋಷಕರ ಪತಿಯ/ಪತ್ನಿಯ ಹೆಸರು ಮತ್ತು ಉದ್ಯೋಗ:
   (ಉದ್ಯೋಗವು ಸರ್ಕಾರಿ/ಅರೆ ಸರ್ಕಾರಿ/ಸಾರ್ವಜನಿಕ ಉದ್ಯಮ/ಖಾಸಗಿ)
5. ಅಭ್ಯರ್ಥಿಯ ಪ್ರಸ್ತುತ ವಿಳಾಸ :
   (ಸ್ಪಷ್ಟವಾಗಿ ನಮೂದಿಸುವುದು)
6. ಅಭ್ಯರ್ಥಿಯ ಖಾಯಂ ವಿಳಾಸ :
7. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು
   ಪ್ರಾಥಮಿಕ
   ಮಾಧ್ಯಮಿಕ
   ಪ್ರೌಢ
8. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರ (ತಂದೆ/ತಾಯಿ ಜೀವಂತವಿಲ್ಲದಿದ್ದರೆ) ಇವರ ಒಟ್ಟು ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ :

   1) ವೇತನ ಶ್ರೇಣಿ
   2) ಜಮೀನಿನ ವಿವರ
   3) ಇತರ ಮೂಲಗಳು

9. ಆದಾಯ ತೆರಿಗೆ ಪಾವತಿದಾರರೇ ?
10. ಸಂಪತ್ತು ತೆರಿಗೆ ಪಾವತಿದಾರರೇ ?
11. ಮಾರಾಟ ತೆರಿಗೆ ಪಾವತಿದಾರರೇ ?

**ಪ್ರಮಾಣೀಕೃತ ಘೋಷಣೆ**

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ/ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.

ಸ್ಥಳ : ತಮ್ಮ ವಿಧೇಯ

ದಿನಾಂಕ : (ಅಭ್ಯರ್ಥಿಯ ಸಹಿ)

ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣೀಕರಿಸುತ್ತಾ, ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗಿರುತ್ತೇನೆ.

ಸ್ಥಳ : ತಂದೆ/ತಾಯಿ/ಪೋಷಕರ ಸಹಿ

ದಿನಾಂಕ : (ತಂದೆ/ತಾಯಿ ಜೀವಂತವಿಲ್ಲದಿದ್ದರೆ)

(ಹೆಂಡತಿ/ಗಂಡ/ಇವರ ಸಹಿ)

**ಸ್ಥಳೀಯ ಇಬ್ಬರು ಸಾಕ್ಷಿದಾರರು**

ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.

ಸಾಕ್ಷಿದಾರರ ಸಹಿ 1)

(ಪೂರ್ಣ ವಿಳಾಸದೊಂದಿಗೆ) 2)

**ಪರಿಶೀಲನಾ ಪ್ರಮಾಣ ಪತ್ರ**

1. ಶ್ರೀ/ಶ್ರೀಮತಿ............................................................................... ಎಂಬುವವರ ಮಗ/ಮಗಳು/ಪತಿ/ಪತ್ನಿ/ಶ್ರೀ/ ಶ್ರೀಮತಿ/ಕುಮಾರಿ................................ ಎಂಬುವವರು ಕರ್ನಾಟಕ ರಾಜ್ಯದ ................................ ಜಿಲ್ಲೆಯ ವಿಭಾಗ ............................ ಗ್ರಾಮ/ಪಟ್ಟಣ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆ ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.

2. ಶ್ರೀ/ಶ್ರೀಮತಿ/ಕುಮಾರಿ ........................................................ ಇವರ ತಂದೆ/ತಾಯಿ/ಪೋಷಕರು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ 31.01.1995 ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ (ಅಡಿಜಚಿಟಥಿ ಖಿಚಿಥಿಜಡಿ) ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ : ತಹಶೀಲ್ದಾರರು

ದಿನಾಂಕ : ........................ ತಾಲ್ಲೂಕು

ಕಛೇರಿಯ ಮೊಹರು

**ಸೂಚನೆ–1**: ಇದರಲ್ಲಿ ಉಪಯೋಗಿಸಲಾದ ''ಸಾಮಾನ್ಯ ನಿವಾಸಿ'' ಎಂಬ ಪದವು 1950ರ ಜನತಾ ಪ್ರಾತಿನಿಧ್ಯ ಕಾಯ್ದೆಯ 20ನೇ ಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ.

**ಸೂಚನೆ–2**: ಪರಿಶೀಲನಾ ಪ್ರಮಾಣ ಪತ್ರ ನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ 31.01.1995 ರನ್ವಯ ಮೇಲುಸ್ತರ (ಅಡಿಜಚಿಟಥಿ ಖಿಚಿಥಿಜಡಿ) ದವರನ್ನು ಗುರುತಿಸಲು ನಿಗದಿಪಡಿಸಲಾಗಿರುವ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ಪ್ರಮಾಣ ಪತ್ರ ನೀಡತಕ್ಕದ್ದು.

**ನಮೂನೆ – 2**

**ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ**

ಶ್ರೀ / ಶ್ರೀಮತಿ ................................................................. ರವರ ಮಗ/ಮಗಳು/ಪತಿ/ಪತ್ನಿ/ಶ್ರೀ/ಶ್ರೀಮತಿ/ಕುಮಾರಿ ................................................ ಜಿಲ್ಲೆ ............................. ತಾಲ್ಲೂಕು ............................... ಗ್ರಾಮದಲ್ಲಿ .......................... ವಾಸವಾಗಿರುವ ಇವರು ಒಂದನೇ ತರಗತಿಯಿಂದ ................................. ತರಗತಿಯವರೆಗೆ ....................................... ಜಿಲ್ಲೆ .................................. ತಾಲ್ಲೂಕು ............................... ಪಟ್ಟಣ ................................................ ಶಾಲೆಯಲ್ಲಿ ವ್ಯಾಸಂಗ ಮಾಡಿ ................................. ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕದ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ, 1964ರ ಅಡಿಯಲ್ಲಿ ನಿರ್ದಿಷ್ಟಪಡಿಸಿದ ಒಂದು ದೊಡ್ಡ ನಗರ ಪ್ರದೇಶ, ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

ಸ್ಥಳ :

ದಿನಾಂಕ :

ಮುಖ್ಯೋಪಾಧ್ಯಾಯರ ಸಹಿ
ಮತ್ತು ಸಂಸ್ಥೆಯ ಪೂರ್ಣ ವಿಳಾಸವುಳ್ಳ ಮೊಹರು

ಮೇಲುರುಜು
ಕ್ಷೇತ್ರ ಶಿಕ್ಷಣಾಧಿಕಾರಿ

**ಕರ್ನಾಟಕ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೆನೆನಿ 2005, ದಿನಾಂಕ: 19.11.2005**

## CERTIFICATE FOR THE PERSONS WITH DISABILITIES

This is to certify that Sri / Smt / Kum ……………………………………………………………………………Son / wife / daughter of Shri………………………………………………………………………………………….. Age ……………………………………… old, male / female, Registration No …………………………………is a case of …………………………………….. He / She is physically disabled/visual disabled/speech & hearing disabled and has ……………………………. % (……………………… percent)

Permanent (physical impairment visual impairment speech & hearing impairment) in relation o his / her ……………………………..

Note :

1. This condition is progressive/non-progressive/likely to improve/not likely To improve.*
2. Re-assessment is not recommended/is recommended after a period of ………………………………..months/years.*

* Strike out which is not applicable

(Recent Attested Photograph showing the disability affixed here)

Countersigned by the
Medical Superintendent CMO/Head
Of Hospital (with seal)

Signature / Thumb impression
of the disabled person

ರಾಜ್ಯ ಸರ್ಕಾರಿ/ ಕೇಂದ್ರ ಸರ್ಕಾರಿ ನೌಕರರು ಒದಗಿಸಬೇಕಾದ ಪ್ರಮಾಣ ಪತ್ರ

**ಶ್ರೀ / ಶ್ರೀಮತಿ...................................................................................... ರವರು ರಾಜ್ಯ / ಕೇಂದ್ರ ಸರ್ಕಾರದಲ್ಲಿ ...................................................................................................................................................(ಪದನಾಮ) ......................................................................................... ಇಲಾಖೆಯಲ್ಲಿ ಖಾಯಂ / ತಾತ್ಕಾಲಿಕ ಹುದ್ದೆಯನ್ನು ದಿನಾಂಕ .............................. ರಿಂದ ........................................... ರವರೆಗೆ ಹೊಂದಿರುವರು.. ಈ ಹುದ್ದೆಗೆ ಇವರು ನೇಮಕಾತಿ ನಿಯಮಗಳಡಿ ಆಯ್ಕೆಯಾಗಿದ್ದು, ಸದರಿ ಹುದ್ದೆಗೆ ಅರ್ಜಿ ಸಲ್ಲಿಸಲು ಅವರಿಗೆ ಅನುಮತಿ ನೀಡಲಾಗಿದೆ.**

**ಸ್ಥಳ:** **ನೇಮಕಾತಿ ಪ್ರಾಧಿಕಾರದ ಸಹಿ/**
**ದಿನಾಂಕ** **ಇಲಾಖೆಯ ಹೆಸರು ಮತ್ತು ಮೊಹರುನೊಂದಿಗೆ**

## CERTIFICATE TO BE FURNISHED BY THE STATE/CENTRAL GOVT. SERVANTS

**Certified that Sri / Smt ……………………………………………………………holds a permanent / temporary post under the State/Central Govt. as ………………………………………(Designation) in the dept. of ……………………………………from…………………………having been appointed therein under the rules of recruitment. He /She is permitted to apply for the said post.**

**Place :** **Signature of the appointing authority**
**Date:** **of the department / with name and seal.**

**ಹೈದರಾಬಾದ್–ಕರ್ನಾಟಕ ಮೀಸಲಾತಿ ಬಯಸಿ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ ಪ್ರಮಾಣ ಪತ್ರ:**

**ಅನುಬಂಧ – ಎ**

**ಅರ್ಹತಾ ಪ್ರಮಾಣ ಪತ್ರ**

[ಅನುಚ್ಛೇದ 371 (ಜೆ) ಮೇರೆಗೆ]

(3(3)ನೇ ನಿಯಮ ನೋಡಿ)

[ಪ್ರಮಾಣ ಪತ್ರ ನೀಡಲು ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್ – ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ನಿಯಮಗಳು, 2013]

ಶ್ರೀ / ಶ್ರೀಮತಿ ------------------ ರವರು -------------------- ರವರ ಮಗ / ಹೆಂಡತಿಯಾಗಿದ್ದು,

ಇವರು ಕರ್ನಾಟಕ ರಾಜ್ಯದ ------------------ ಜಿಲ್ಲೆಯ ----------------- ತಾಲ್ಲೂಕಿನ ------------------ ಗ್ರಾಮ / ಪಟ್ಟಣದ ಸ್ಥಳೀಯ ವ್ಯಕ್ತಿಯಾಗಿದ್ದಾರೆ.

ಸ್ಥಳ: --------------------

ದಿನಾಂಕ: ------------------

ಹೆಸರು --------------------

ಅಸಿಸ್ಟೆಂಟ್ ಕಮೀಷನರ್

-----------------ಉಪವಿಭಾಗ

-----------------ಜಿಲ್ಲೆ

(ಸಕ್ಷಮ ಪ್ರಾಧಿಕಾರಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಲಾದ ಅಂತಿಮ ದಿನಾಂಕದಂದು ಅಭ್ಯರ್ಥಿಯು ಸಾರ್ವಜನಿಕ ಉದ್ಯೋಗ ಆದೇಶದಂತೆ ಸ್ಥಳೀಯ ವ್ಯಕ್ತಿಯೆಂದು ಅರ್ಹತೆ ಪಡೆದಿರುತ್ತಾನೆಂದು ಒಂದು ಅಡಿ ಟಿಪ್ಪಣಿಯನ್ನು ದಾಖಲಿಸುವುದು.)

## ಅನುಬಂಧ – 1

ವಿವಿಧ ವಿಭಾಗಗಳಲ್ಲಿನ ವೈಜ್ಞಾನಿಕ ಅಧಿಕಾರಿಗಳ ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ. ಅವಶ್ಯಕತೆ ಹಾಗೂ ಸಂದರ್ಭಕ್ಕೆ ಅನುಗುಣವಾಗಿ ಇದನ್ನು ಬದಲಾವಣೆ ಮಾಡಿಕೊಳ್ಳಬಹುದಾಗಿದೆ.

**1) ವೈಜ್ಞಾನಿಕ ಅಧಿಕಾರಿ ರಸಾಯನಶಾಸ್ತ್ರ ವಿಭಾಗ : 07 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ:**

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕ | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಮಹಿಳಾ ಅಭ್ಯರ್ಥಿ | ಕನ್ನಡ ಮಾಧ್ಯಮ | ಇತರರು |
|---|---|---|---|---|---|---|---|---|
| ಸಾಮಾನ್ಯ ವರ್ಗ | 03 | 01 | – | – | – | 01 | – | 01 |
| ಪರಿಶಿಷ್ಟ ಜಾತಿ | 02 | 01 | – | – | – | 01 | – | – |
| ಪರಿಶಿಷ್ಟ ಪಂಗಡ | – | – | – | – | – | – | – | – |
| ಪ್ರವರ್ಗ–1 | – | – | – | – | – | – | – | – |
| ಪ್ರವರ್ಗ–2ಎ | 01 | 01 | – | – | – | – | – | – |
| ಪ್ರವರ್ಗ–2ಬಿ | 01 | – | – | – | – | – | – | 01 |
| ಪ್ರವರ್ಗ–3ಎ | – | – | – | – | – | – | – | – |
| ಪ್ರವರ್ಗ–3ಬಿ | – | – | – | – | – | – | – | – |
| **ಒಟ್ಟು** | **07** | **03** | **–** | **–** | **–** | **02** | **–** | **02** |

**2) ವೈಜ್ಞಾನಿಕ ಅಧಿಕಾರಿ ನಾರ್‌ಕೋಟಿಕ್ಸ್ ವಿಭಾಗ : 05 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ:**

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕ | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಮಹಿಳಾ ಅಭ್ಯರ್ಥಿ | ಕನ್ನಡ ಮಾಧ್ಯಮ | ಇತರರು |
|---|---|---|---|---|---|---|---|---|
| ಸಾಮಾನ್ಯ ವರ್ಗ | 02 | – | – | – | – | 01 | – | 01 |
| ಪರಿಶಿಷ್ಟ ಜಾತಿ | 01 | – | – | – | – | – | – | 01 |
| ಪರಿಶಿಷ್ಟ ಪಂಗಡ | 01 | – | – | – | – | – | – | 01 |
| ಪ್ರವರ್ಗ–1 | 01 | – | – | – | – | – | – | 01 |
| ಪ್ರವರ್ಗ–2ಎ | – | – | – | – | – | – | – | – |
| ಪ್ರವರ್ಗ–2ಬಿ | – | – | – | – | – | – | – | – |
| ಪ್ರವರ್ಗ–3ಎ | – | – | – | – | – | – | – | – |
| ಪ್ರವರ್ಗ–3ಬಿ | – | – | – | – | – | – | – | – |
| **ಒಟ್ಟು** | **05** | **–** | **–** | **–** | **–** | **01** | **–** | **04** |

3) ವೈಜ್ಞಾನಿಕ ಅಧಿಕಾರಿ ಭೌತಶಾಸ್ತ್ರ ವಿಭಾಗ : 03 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ:

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕ | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಮಹಿಳಾ ಅಭ್ಯರ್ಥಿ | ಕನ್ನಡ ಮಾಧ್ಯಮ | ಇತರರು |
|---|---|---|---|---|---|---|---|---|
| ಸಾಮಾನ್ಯ ವರ್ಗ | 01 | – | – | – | – | 01 | – | – |
| ಪರಿಶಿಷ್ಟ ಜಾತಿ | 01 | – | – | – | – | 01 | – | – |
| ಪರಿಶಿಷ್ಟ ಪಂಗಡ | – | – | – | – | – | – | – | – |
| ಪ್ರವರ್ಗ–1 | – | – | – | – | – | – | – | – |
| ಪ್ರವರ್ಗ–2ಎ | – | – | – | – | – | – | – | – |
| ಪ್ರವರ್ಗ–2ಬಿ | 01 | – | – | – | – | – | – | 01 |
| ಪ್ರವರ್ಗ–3ಎ | – | – | – | – | – | – | – | – |
| ಪ್ರವರ್ಗ–3ಬಿ | – | – | – | – | – | – | – | – |
| **ಒಟ್ಟು** | **03** | **–** | **–** | **–** | **–** | **02** | **–** | **01** |

4) ವೈಜ್ಞಾನಿಕ ಅಧಿಕಾರಿ ಡಿ.ಎನ್.ಎ., ವಿಭಾಗ : 09 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ:

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕ | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಮಹಿಳಾ ಅಭ್ಯರ್ಥಿ | ಕನ್ನಡ ಮಾಧ್ಯಮ | ಇತರರು |
|---|---|---|---|---|---|---|---|---|
| ಸಾಮಾನ್ಯ ವರ್ಗ | 04 | 01 | 01 | – | – | 01 | – | 01 |
| ಪರಿಶಿಷ್ಟ ಜಾತಿ | 02 | – | – | – | – | 01 | – | 01 |
| ಪರಿಶಿಷ್ಟ ಪಂಗಡ | 01 | – | – | – | – | – | – | 01 |
| ಪ್ರವರ್ಗ–1 | 01 | – | – | – | – | – | – | 01 |
| ಪ್ರವರ್ಗ–2ಎ | 01 | – | – | – | – | – | – | 01 |
| ಪ್ರವರ್ಗ–2ಬಿ | – | – | – | – | – | – | – | – |
| ಪ್ರವರ್ಗ–3ಎ | – | – | – | – | – | – | – | – |
| ಪ್ರವರ್ಗ–3ಬಿ | – | – | – | – | – | – | – | – |
| **ಒಟ್ಟು** | **09** | **01** | **01** | **–** | **–** | **02** | **–** | **05** |

5) ವೈಜ್ಞಾನಿಕ ಅಧಿಕಾರಿ ಪ್ರಶ್ನಿತ ದಸ್ತಾವೇಜು ವಿಭಾಗ : 05 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ:

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕ | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಮಹಿಳಾ ಅಭ್ಯರ್ಥಿ | ಕನ್ನಡ ಮಾಧ್ಯಮ | ಇತರರು |
|---|---|---|---|---|---|---|---|---|
| ಸಾಮಾನ್ಯ ವರ್ಗ | 02 | 01 | – | – | – | – | – | 01 |
| ಪರಿಶಿಷ್ಟ ಜಾತಿ | 01 | 01 | – | – | – | – | – | – |
| ಪರಿಶಿಷ್ಟ ಪಂಗಡ | – | – | – | – | – | – | – | – |
| ಪ್ರವರ್ಗ–1 | – | – | – | – | – | – | – | – |
| ಪ್ರವರ್ಗ–2ಎ | 01 | – | – | – | – | 01 | – | – |
| ಪ್ರವರ್ಗ–2ಬಿ | 01 | – | – | – | – | – | – | 01 |
| ಪ್ರವರ್ಗ–3ಎ | – | – | – | – | – | – | – | – |
| ಪ್ರವರ್ಗ–3ಬಿ | – | – | – | – | – | – | – | – |
| **ಒಟ್ಟು** | **05** | **02** | **–** | **–** | **–** | **01** | **–** | **02** |

6) ವೈಜ್ಞಾನಿಕ ಅಧಿಕಾರಿ ಅಗ್ನಿ ಅಸ್ತ್ರ ವಿಭಾಗ : 05 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ:

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕ | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಮಹಿಳಾ ಅಭ್ಯರ್ಥಿ | ಕನ್ನಡ ಮಾಧ್ಯಮ | ಇತರರು |
|---|---|---|---|---|---|---|---|---|
| ಸಾಮಾನ್ಯ ವರ್ಗ | 02 | – | 01 | – | – | 01 | – | – |
| ಪರಿಶಿಷ್ಟ ಜಾತಿ | 01 | – | – | – | – | 01 | – | – |
| ಪರಿಶಿಷ್ಟ ಪಂಗಡ | – | – | – | – | – | – | – | – |
| ಪ್ರವರ್ಗ–1 | – | – | – | – | – | – | – | – |
| ಪ್ರವರ್ಗ–2ಎ | 01 | – | – | – | – | – | – | 01 |
| ಪ್ರವರ್ಗ–2ಬಿ | 01 | – | – | – | – | – | – | 01 |
| ಪ್ರವರ್ಗ–3ಎ | – | – | – | – | – | – | – | – |
| ಪ್ರವರ್ಗ–3ಬಿ | – | – | – | – | – | – | – | – |
| **ಒಟ್ಟು** | **05** | **–** | 01 | **–** | **–** | 02 | **–** | **02** |

7) ವೈಜ್ಞಾನಿಕ ಅಧಿಕಾರಿ ಮನೋ–ವಿಜ್ಞಾನ ವಿಭಾಗ : 04 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ:

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕ | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಮಹಿಳಾ ಅಭ್ಯರ್ಥಿ | ಕನ್ನಡ ಮಾಧ್ಯಮ | ಇತರರು |
|---|---|---|---|---|---|---|---|---|
| ಸಾಮಾನ್ಯ ವರ್ಗ | 02 | – | 01 | – | – | 01 | – | – |
| ಪರಿಶಿಷ್ಟ ಜಾತಿ | 01 | – | – | – | – | 01 | – | – |
| ಪರಿಶಿಷ್ಟ ಪಂಗಡ | – | – | – | – | – | – | – | – |
| ಪ್ರವರ್ಗ–1 | – | – | – | – | – | – | – | – |
| ಪ್ರವರ್ಗ–2ಎ | – | – | – | – | – | – | – | – |
| ಪ್ರವರ್ಗ–2ಬಿ | 01 | – | – | – | – | – | – | 01 |
| ಪ್ರವರ್ಗ–3ಎ | – | – | – | – | – | – | – | – |
| ಪ್ರವರ್ಗ–3ಬಿ | – | – | – | – | – | – | – | – |
| **ಒಟ್ಟು** | **04** | – | 01 | – | – | 02 | – | **01** |

8) ವೈಜ್ಞಾನಿಕ ಅಧಿಕಾರಿ ಕಂಪ್ಯೂಟರ್ ಫೋರೆನ್ಸಿಕ್ ವಿಭಾಗ : 04 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ:

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕ | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಮಹಿಳಾ ಅಭ್ಯರ್ಥಿ | ಕನ್ನಡ ಮಾಧ್ಯಮ | ಇತರರು |
|---|---|---|---|---|---|---|---|---|
| ಸಾಮಾನ್ಯ ವರ್ಗ | 02 | – | – | – | – | 01 | – | 01 |
| ಪರಿಶಿಷ್ಟ ಜಾತಿ | 01 | – | – | – | – | – | – | 01 |
| ಪರಿಶಿಷ್ಟ ಪಂಗಡ | 01 | – | – | – | – | – | – | 01 |
| ಪ್ರವರ್ಗ–1 | – | – | – | – | – | – | – | – |
| ಪ್ರವರ್ಗ–2ಎ | – | – | – | – | – | – | – | – |
| ಪ್ರವರ್ಗ–2ಬಿ | – | – | – | – | – | – | – | – |
| ಪ್ರವರ್ಗ–3ಎ | – | – | – | – | – | – | – | – |
| ಪ್ರವರ್ಗ–3ಬಿ | – | – | – | – | – | – | – | – |
| **ಒಟ್ಟು** | **04** | – | – | – | – | 01 | – | **03** |

9) ವೈಜ್ಞಾನಿಕ ಅಧಿಕಾರಿ ಮೊಬೈಲ್ ಫೋರೆನ್ಸಿಕ್ ವಿಭಾಗ : 04 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ:

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕ | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಮಹಿಳಾ ಅಭ್ಯರ್ಥಿ | ಕನ್ನಡ ಮಾಧ್ಯಮ | ಇತರರು |
|---|---|---|---|---|---|---|---|---|
| ಸಾಮಾನ್ಯ ವರ್ಗ | 02 | – | – | – | – | 01 | – | 01 |
| ಪರಿಶಿಷ್ಟ ಜಾತಿ | 01 | – | – | – | – | – | – | 01 |
| ಪರಿಶಿಷ್ಟ ಪಂಗಡ | 01 | – | – | – | – | – | – | 01 |
| ಪ್ರವರ್ಗ–1 | – | – | – | – | – | – | – | – |
| ಪ್ರವರ್ಗ–2ಎ | – | – | – | – | – | – | – | – |
| ಪ್ರವರ್ಗ–2ಬಿ | – | – | – | – | – | – | – | – |
| ಪ್ರವರ್ಗ–3ಎ | – | – | – | – | – | – | – | – |
| ಪ್ರವರ್ಗ–3ಬಿ | – | – | – | – | – | – | – | – |
| **ಒಟ್ಟು** | **04** | – | – | – | – | 01 | – | **03** |

10) ವೈಜ್ಞಾನಿಕ ಅಧಿಕಾರಿ ಆಡಿಯೋ ವಿಡಿಯೋ ಫೋರೆನ್ಸಿಕ್ ವಿಭಾಗ : 04 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ:

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕ | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಮಹಿಳಾ ಅಭ್ಯರ್ಥಿ | ಕನ್ನಡ ಮಾಧ್ಯಮ | ಇತರರು |
|---|---|---|---|---|---|---|---|---|
| ಸಾಮಾನ್ಯ ವರ್ಗ | 02 | – | – | – | – | 01 | – | 01 |
| ಪರಿಶಿಷ್ಟ ಜಾತಿ | 01 | – | – | – | – | – | – | 01 |
| ಪರಿಶಿಷ್ಟ ಪಂಗಡ | 01 | – | – | – | – | – | – | 01 |
| ಪ್ರವರ್ಗ–1 | – | – | – | – | – | – | – | – |
| ಪ್ರವರ್ಗ–2ಎ | – | – | – | – | – | – | – | – |
| ಪ್ರವರ್ಗ–2ಬಿ | – | – | – | – | – | – | – | – |
| ಪ್ರವರ್ಗ–3ಎ | – | – | – | – | – | – | – | – |
| ಪ್ರವರ್ಗ–3ಬಿ | – | – | – | – | – | – | – | – |
| **ಒಟ್ಟು** | **04** | – | – | – | – | 01 | – | **03** |

**11) ವಿಷ ವಿಜ್ಞಾನ ವಿಭಾಗ : 04(ಹೈ–ಕ) ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ:**

| **ವರ್ಗ** | **ಒಟ್ಟು ಹುದ್ದೆಗಳ ಸಂಖ್ಯೆ** | **ಗ್ರಾಮೀಣ ಅಭ್ಯರ್ಥಿ** | **ಅಂಗವಿಕಲ ಅಭ್ಯರ್ಥಿ** | **ಮಾಜಿ ಸೈನಿಕ** | **ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ** | **ಮಹಿಳಾ ಅಭ್ಯರ್ಥಿ** | **ಕನ್ನಡ ಮಾಧ್ಯಮ** | **ಇತರರು** |
|---|---|---|---|---|---|---|---|---|
| ಸಾಮಾನ್ಯ ವರ್ಗ | 02 | – | – | – | – | 01 | – | 01 |
| ಪರಿಶಿಷ್ಟ ಜಾತಿ | 01 | – | – | – | – | – | – | 01 |
| ಪರಿಶಿಷ್ಟ ಪಂಗಡ | 01 | – | – | – | – | – | – | 01 |
| ಪ್ರವರ್ಗ–1 | – | – | – | – | – | – | – | – |
| ಪ್ರವರ್ಗ–2ಎ | – | – | – | – | – | – | – | – |
| ಪ್ರವರ್ಗ–2ಬಿ | – | – | – | – | – | – | – | – |
| ಪ್ರವರ್ಗ–3ಎ | – | – | – | – | – | – | – | – |
| ಪ್ರವರ್ಗ–3ಬಿ | – | – | – | – | – | – | – | – |
| **ಒಟ್ಟು** | **04** | – | – | – | – | **01** | – | **03** |

ಸಹಿ/–
ನಿರ್ದೇಶಕರು,
ನ್ಯಾಯ ವಿಜ್ಞಾನ ಪ್ರಯೋಗಾಲಯಗಳು,
ಬೆಂಗಳೂರು.